ಸಂಪುಟ : 9 ಸಂಚಿಕೆ 232 ಪುಟ : 4 ಬೆಲೆ: 3.00 ಬುಧವಾರ ಅಕ್ಟೋಬರ್ 23 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 232 Pages : 4 Price : 3.00 Wednesday October 23 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಗದಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅ.23ರಂದು ಬೆಳಿಗ್ಗೆ 11ಕ್ಕೆ "ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ" ಆಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಜಯಂತಿಗೆ ಸರ್ವರೂ ಆಗಮಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಕೋರಿದ್ದಾರೆ.

## ಇಂದು ಸಚಿವ ದಿನೇಶ್ ಗುಂಡೂರಾವ್ ಜಿಲ್ಲಾ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ



ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಅ.23ರಂದು ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ಸಚಿವರು ಬೆ.9.30 ಗಂಟೆಗೆ ಹೊಸಪೇಟೆಯಿಂದ ನಿರ್ಗಮಿಸಿ ರಸ್ತೆ ಮೂಲಕ 10.30ಕ್ಕೆ ಯಲಬುರ್ಗಾ ತಾಲೂಕಿನ ಬಂಡಿ ಗ್ರಾಮಕ್ಕೆ ಆಗಮಿಸಿ, ಬಂಡಿ ಗ್ರಾಮದ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ಉದ್ಘಾಟನೆ ಹಾಗೂ ಸಣ್ಣ ನೀರಾವರಿ ಇಲಾಖೆಯ ಬ್ರಿಡ್ಜ್ ಕಂ ಬ್ಯಾರೇಜ್ ಶಂಕು ಸ್ಥಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ನಂತರ ಚಿಕ್ಕಮ್ಯಾಗೇರಿ ಗ್ರಾಮಕ್ಕೆ ತೆರಳಿ, ಚಿಕ್ಕಮ್ಯಾಗೇರಿಯ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮ.2.30 ರಿಂದ 03 ಗಂಟೆಯವರೆಗೆ ಕುಕನೂರು ನಿರೀಕ್ಷಣಾ ಕೇಂದ್ರದಲ್ಲಿರುವರು. ಮ.3.15ಕ್ಕೆ ಕುಕನೂರು ತಾಲೂಕಿನ ಬಳಗೇರಿ ಗ್ರಾಮಕ್ಕೆ ತೆರಳಿ ಬಳಗೇರಿಯ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ಉದ್ಘಾಟನೆ ಹಾಗೂ ಸಣ್ಣ ನೀರಾವರಿ ಇಲಾಖೆಯ ಬ್ರಿಡ್ಜ್ ಕಂ ಬ್ಯಾರೇಜ್ ಶಂಕು ಸ್ಥಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಬಳಿಕ ಬಳಗೇರಿ ಗ್ರಾಮದಿಂದ ಹುಬ್ಬಳ್ಳಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನ್ನದಾತರಿಗಾಗಿ 'ರೈತರ ಶಾಲೆ' ಆರಂಭ; ಭಾರತದಲ್ಲೇ ಮೊದಲು!

■ ವಿಜಯಸಾಕ್ಷಿ ಸುದ್ದಿ, ಮಂಡ್ಯ

ಯುವಜನತೆ ನಗರಗಳಿಗೆ ವಲಸೆ ಹೋಗುವುದನ್ನು ತಪ್ಪಿಸಲು ಮತ್ತು ವಿದ್ಯಾವಂತರನ್ನು ವ್ಯವಸಾಯದೆಡೆಗೆ ಆಕರ್ಷಿಸಲು, ಮಂಡ್ಯ ತಾಲ್ಲೂಕಿನ ಆಲಕೆರೆ ಗ್ರಾಮದಲ್ಲಿ ರೈತರಿಗಾಗಿ 'ರೈತರ ಶಾಲೆ' ತೆರೆಯಲು ಶಿಕ್ಷಕರ ಗುಂಪೊಂದು ಮುಂದಾಗಿದೆ.

### ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ

# ಲಸಿಕಾ ಅಭಿಯಾನ ಯಶಸ್ವಿಗೆ ಶ್ರಮಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

6ನೇ ಸುತ್ತಿನ ರಾಷ್ಟ್ರೀಯ ಕಾಲುಬಾಯಿ ರೋಗ ಲಸಿಕಾ ಅಭಿಯಾನವು ಜಿಲ್ಲಾದ್ಯಂತ ಅಕ್ಟೋಬರ್ 21ರಿಂದ ನವೆಂಬರ್ 20ರವರೆಗೆ ಜರುಗುತ್ತಿದ್ದು, ಅಭಿಯಾನ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾಲುಬಾಯಿ ರೋಗಗಳಿಂದ ಜಾನುವಾರುಗಳನ್ನು ರಕ್ಷಿಸಲು ಕಾಲುಬಾಯಿ ಲಸಿಕಾಕರಣ ಮುಖ್ಯವಾಗಿದ್ದು, ಜಾನುವಾರುಗಳಿಗೆ ತಪಾಸಣೆ ನಡೆಸಿ ತಪ್ಪದೇ ಲಸಿಕೆ ಹಾಕಬೇಕು. ಈ ಕುರಿತು ಜಾನುವಾರು ಮಾಲೀಕರಿಗೆ ಲಸಿಕಾಕರಣದ ಕುರಿತು ಅರಿವು ಮೂಡಿಸಬೇಕೆಂದು ಜಿಲ್ಲಾಧಿಕಾರಿ ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಕಾಲುಬಾಯಿ ಲಸಿಕೆಯನ್ನು ಮನೆ ಮನೆಗೆ ಭೇಟಿ ನೀಡಿ ಜಾನುವಾರುಗಳಿಗೆ ನೀಡಲಾಗುತ್ತಿದೆ. ಲಸಿಕಾಕರಣದಿಂದ ಯಾವುದೇ ಜಾನುವಾರು ವಂಚಿತವಾಗದಂತೆ



ನೋಡಿಕೊಳ್ಳಬೇಕು ಎಂದರಲ್ಲದೆ, 6ನೇ ಸುತ್ತಿನ ಕಾಲುಬಾಯಿ ಲಸಿಕೆ ಹಾಕಬೇಕಾದ ಜಾನುವಾರುಗಳ ಕುರಿತು ತಾಲೂಕಾವಾರು ಮಾಹಿತಿ ಪಡೆದು ಚರ್ಚಿಸಿದರು. ಜಿಲ್ಲೆಯ ಜಾನುವರುಗಳ ಲಸಿಕಾಕರಣಕ್ಕೆ ಅಗತ್ಯವಿರುವ ಔಷಧಿ ವ್ಯವಸ್ಥೆ ಮತ್ತು ಶಿತಲೀಕರಣ ವ್ಯವಸ್ಥೆ ಕುರಿತು ಸೂಕ್ತ ಸಿದ್ಧತೆ ಮಾಡಿಕೊಳ್ಳುವಂತೆ ಸೂಚಿಸಿದರು.

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಎಚ್.ಬಿ. ಹುಲಗಣ್ಣವರ ಮಾತನಾಡಿ, ಜಿಲ್ಲೆಯಲ್ಲಿ ದನ ಮತ್ತು ಎಮ್ಮೆ ಸೇರಿದಂತೆ ಒಟ್ಟಾರೆ 192109 ಜಾನುವಾರುಗಳಿಗೆ ಕಾಲುಬಾಯಿ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ತಿಳಿಸಿ, ಸಭೆಗೆ ವಿವರ ನೀಡಿದರು.

ಲಸಿಕೆಯನ್ನು ಸಂಗ್ರಹಿಸಿಡಲು ಶಿತಲೀಕರಣದ ವ್ಯವಸ್ಥೆ ಮಾಡಲಾಗಿದ್ದು, 3 ವಾಕ್ ಇನ್ ಕೂಲರ್, 16 ಐಸ್‌ಲೈನ್ ರೆಫ್ರಿಜರೇಟರ್, 19 ಐಸ್‌ಲೈನ್ ರೆಫ್ರಿಜರೇಟರ್ ಫ್ರೀಜರ್, 7 ಆಕ್ಟಿವ್ ಕೂಲರ್ ಬಾಕ್ಸ್, 86 ರೆಫ್ರಿಜರೇಟರ್, 173 ವ್ಯಾಕ್ಸಿನ್ ಕ್ಯಾರಿಯರ್‌ಗಳ ವ್ಯವಸ್ಥೆ ಮಾಡಿಕೊಳ್ಳಲಾಗಿದೆ.

> ಒಟ್ಟಾರೆ ಕಾಲುಬಾಯಿ ರೋಗ ಲಸಿಕಾ ಅಭಿಯಾನ ಯಶಸ್ವಿಗೊಳಿಸಲು ಸರಿಯಾದ ಯೋಜನೆ ರೂಪಿಸಬೇಕು. ರೂಪಿಸಿದ ಯೋಜನೆಯಂತೆ ನಿಗದಿತ ಅವಧಿಯೊಳಗೆ ಅನುಷ್ಠಾನಗೊಳಿಸಿ ಪೂರ್ಣಗೊಳಿಸಬೇಕು. ಈ ಕುರಿತು ಸಾರ್ವಜನಿಕರಿಗೆ ಮುಂಚಿತವಾಗಿಯೇ ಮಾಹಿತಿ ಇರುವಂತೆ ಇಲಾಖಾಧಿಕಾರಿಗಳು ನೋಡಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ತಿಳಿಸಿದರು.

150 ಲಸಿಕಾದಾರರು ಲಸಿಕೆ ಹಾಕಲಿದ್ದು, 11 ಲಸಿಕಾ ತಂಡದ ಮುಖ್ಯಸ್ಥರಿದ್ದಾರೆ. ಲಸಿಕಾ ಕಾರ್ಯಕ್ರಮಕ್ಕಾಗಿ ಜಿಲ್ಲೆಯ 7 ತಾಲೂಕುಗಳಲ್ಲಿ 2598 ಬ್ಲಾಕ್‌ಗಳನ್ನು ರಚಿಸಲಾಗಿದೆ ಎಂದು ವಿವರಿಸಿದರು.

ಇದೇ ಸಂದರ್ಭದಲ್ಲಿ ಕಾಲುಬಾಯಿ ರೋಗ ಮಾಹಿತಿ ಕುರಿತು ಪೋಸ್ಟರ್ ಮತ್ತು ಕರಪತ್ರಗಳನ್ನು ಬಿಡುಗಡೆ ಮಾಡಲಾಯಿತು. ಸಭೆಯಲ್ಲಿ ಪಶುಸಂಗೋಪನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ತಾಲೂಕಾ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಕಪ್ಪತ್ತಗುಡ್ಡದಲ್ಲಿ ಗಣಿಗಾರಿಕೆಗೆ ಅವಕಾಶ ನೀಡಬಾರದು

■ ವಿಜಯಸಾಕ್ಷಿ ಸುದ್ದಿ, ಗದಗ

ಪಶ್ಚಿಮ ಘಟ್ಟದಷ್ಟೇ ಮಹತ್ವ ಹೊಂದಿರುವ ಕಪ್ಪತ್ತಗುಡ್ಡದಲ್ಲಿ ಯಾವುದೇ ಕಾರಣಕ್ಕೂ ಗಣಿಗಾರಿಕೆಗೆ ಅವಕಾಶ ನೀಡಬಾರದು ಎಂದು ಬೆಟಗೇರಿ ರೈಲ್ವೆ ಹೋರಾಟ ಸಮಿತಿ ಮುಖಂಡ ಗಣೇಶ್ ಸಿಂಗ್ ಬ್ಯಾಳಿ ಆಗ್ರಹಿಸಿದರು.

ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಪ್ಪತಗುಡ್ಡದ ವನ್ಯ ಸಂಪತ್ತಿಗೆ ರಕ್ಷಣೆ ಬೇಕಾಗಿದೆ. ಅದೊಂದು ನಿಸರ್ಗ ಸಂಪತ್ತು, ಜೀವರಾಶಿಗೆ, ಸಸ್ಯ ಸಂಕುಲಕ್ಕೆ, ಔಷಧೀಯ ಸಂಪತ್ತಿಗೆ ಆಶ್ರಯ ನೀಡುತ್ತ ಬಂದಿರುವ ಈ ಕಪ್ಪತ್ತಗುಡ್ಡ ಸಮುದ್ರ ಮಟ್ಟದಿಂದ 2700 ಅಡಿ ಎತ್ತರವಿದ್ದು, ಗದಗ ತಾಲೂಕಿನ ಬಿಂಕದಕಟ್ಟಿಯಿಂದ ಮುಂಡರಗಿ ತಾಲೂಕಿನ ಸಿಂಗಟಾಲೂರಿನವರೆಗೂ 63 ಕಿ.ಮಿ. ಉದ್ದ ಹಾಗೂ 3200 ಹೆಕ್ಟೇರ್ ಒಟ್ಟು 17.872 ಹೆಕ್ಟೇರ್ ಪ್ರದೇಶ ಹೊಂದಿದ್ದು ಈ ಗುಡ್ಡದಲ್ಲಿ 300ಕ್ಕೂ ಹೆಚ್ಚು ಜಾತಿಯ ಔಷಧಿ ಸಸ್ಯಗಳ ಆಗರವಾಗಿದೆ. ಅಲ್ಲದೇ ಸುಮಾರು 1000ಕ್ಕೂ ಹೆಚ್ಚು ನವಿಲುಗಳು, ಹೈನಾ, ಚಿರತೆ, ಕಾಡುಹಂದಿ ಸೇರಿದಂತೆ ಮತ್ತಿತರ ವನ್ಯ ಜೀವಿಗಳ ಆಶ್ರಯ ತಾಣವಾಗಿದೆ. ಕಪ್ಪತ್ತಗುಡ್ಡವನ್ನು ಮೋಡಗಳು ಚುಂಬಿಸಿದರೆ, ಉತ್ತರ ಕರ್ನಾಟಕದಲ್ಲಿ ಮಳೆ ಎಂಬುದು ವಾಡಿಕೆ. ಬಂಗಾರ, ಮ್ಯಾಂಗನೀಸ್, ತಾಮ್ರ, ಕ್ಯಾಲ್ಸಿಯಂ




ಹಾಗೂ ಕಬ್ಬಿಣ ಸೇರಿದಂತೆ 60ಕ್ಕೂ ಹೆಚ್ಚು ಪ್ರತಿಶತ ಅದಿರಿನಿಂದ ಕೂಡಿದೆ. ಇಂತಹ ಸುಂದರ ತಾಣದಲ್ಲಿ ಯಾವುದೇ ಕಾರಣಕ್ಕೂ ಗಣಿಗಾರಿಕೆಗೆ ಅವಕಾಶ ಮಾಡಿ ಕೊಡಬಾರದು ಎಂದು ಗಣೇಶಸಿಂಗ್ ಬ್ಯಾಳಿ ಆಗ್ರಹಿಸಿದರು.

ಗದಗ ತಾಲೂಕಿನಲ್ಲಿ 402 ಹೆಕ್ಟೇರ್, ಶಿಹರಟ್ಟಿ 2016 ಹೆಕ್ಟೇರ್ ಹಾಗೂ ಮುಂಡರಗಿ 15434 ಹೆಕ್ಟರ್ ವ್ಯಾಪ್ತಿಯ ಈ ಕಪ್ಪತ್ತಗುಡ್ಡ ಅರಣ್ಯ ಪ್ರದೇಶ ಹೊಂದಿದ್ದು, ಅದರಲ್ಲಿ ಅಂದಾಜು 90 ಹೆಕ್ಟರ್‌ನಷ್ಟು ಔಷಧೀಯ ಸಸ್ಯಗಳ ರಕ್ಷಣೆಗೆ ಮೀಸಲಾಗಿದೆ. ಗಿರಿಯ ಒಡಲಲ್ಲಿ ಅಮೂಲ್ಯ ಸಸ್ಯ ಸಂಪತ್ತಿನೊಂದಿಗೆ ಮಾನವ ಸಮಾಜದ ಭವಿಷ್ಯಕ್ಕೆ ಔಷಧಿ ಸಸ್ಯಗಳು ಹೊಂದಿದ ಈ ಗುಡ್ಡ ವಿಶ್ವವನ್ನೆ ಬೆರಗುಗೊಳಿಸಿದೆ. 22. 06. 2016 ರಂದು ಜಿಲ್ಲೆಯ ಎಲ್ಲ ಸಂಘಟನೆಗಳ ಬೆಂಬಲ ಹಾಗೂ ಪೂಜ್ಯ ನಂದಿವೇರಿ ಮಠದ ಶಿವಕುಮಾರ ಮಹಾಸ್ವಾಮಿಗಳು ಸೇರಿದಂತೆ 50ಕ್ಕೂ ಹೆಚ್ಚು ಮಠಾಧೀಶರ ಬೆಂಬಲ ಹಾಗೂ ಆಶೀರ್ವಾದದಿಂದ ಕಪ್ಪತ್ತಗುಡ್ಡದಲ್ಲಿ ಯಾವುದೇ ಕಾರಣಕ್ಕೂ ಗಣಿಗಾರಿಕೆಗೆ ಅವಕಾಶ ನೀಡದೇ ಕಪ್ಪತ್ತಗುಡ್ಡ ಸಂರಕ್ಷಿತ ಪ್ರದೇಶವೆಂದು ಘೋಷಿಸುವಂತೆ ಒತ್ತಾಯಿಸಿ 28. 12. 2016 ರಂದು ಬೆಟಗೇರಿ ರೇಲ್ವೆ ಹೋರಾಟ ಸಮಿತಿಯಿಂದ ಗದಗ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗಿತ್ತು ಎಂದರು.

ನಂತರ 19. 12. 2016 ರಂದು ಗಣಿಗಾರಿಕೆಗೆ ಸರಕಾರ ಆದೇಶವನ್ನು ಹಿಂಪಡೆಯಲು ಸಹ ಒತ್ತಾಯಿಸಲಾಯಿತು. ಈ ಕುರಿತು 22. 12. 2016 ರಂದು ಪೂಜ್ಯ ಡಾ: ಸಿದ್ಧಲಿಂಗ ಮಹಾಸ್ವಾಮಿಗಳೊಡನೆ ಚರ್ಚಿಸಿ ಹೋರಾಟದ ರೂಪರೇಷೆ ಸಿದ್ಧಪಡಿಸಲಾಗಿತ್ತು. ಈಗಿನ ವಿಧಾನ ಪರಿಷತ್ ಸಭಾಪತಿಗಳು ಆಗಿನ ವಿಧಾನ ಪರಿಷತ್ ಸದಸ್ಯರಾದ ಬಸವರಾಜ ಹೊರಟ್ಟಿಯವರು 22. 12. 2016 ರಂದು ಕಪ್ಪತ್ತಗುಡ್ಡದ ಸಂಪತ್ತಿಗೆ ಕನ್ನಹಾಕಲು ಒಳಸಂಚು ಮುಂದಾಗುವ ಪರಿಣಾಮಕ್ಕೆ ಸರಕಾರವೇ ಹೊಣೆ ಎಂದು ಎಚ್ಚರಿಸಿದರು.

ಕಪ್ಪತ್ತಗುಡ್ಡದಲ್ಲಿ ಗಣಿಗಾರಿಕೆ ಜರುಗಿಸುವ ಕುರಿತಾದ ವಾಸ್ತವ ಸ್ಥಿತಿಯ ವರದಿಯನ್ನು ಸಲ್ಲಿಸಲು ಡಿವಿಜನಲ್ ಕಮೀಷನರ್ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ಎಲ್ಲ ವಿವರವನ್ನು ಶೀಘ್ರದಲ್ಲಿ ಡಿವಿಜನಲ್ ಕಮೀಷನ್ ಬೆಳಗಾವಿ ಇವರಿಗೆ ಸಮಿತಿಯಿಂದ ಮನವರಿಕೆ ಮಾಡಿಕೊಟ್ಟು ಯಾವುದೇ ಪರಿಸ್ಥಿತಿಯಲ್ಲಿ ಕಪ್ಪತ್ತಗುಡ್ಡದಲ್ಲಿ ಗಣಿಗಾರಿಕೆಗೆ ಅವಕಾಶ ನೀಡದಂತೆ ಅದನ್ನು ವನ್ಯ ಜೀವಿ ಹಾಗೂ ಸಂರಕ್ಷಣಾ ಪ್ರದೇಶವೆಂದು ಘೋಷಿಸಿ ಶಾಶ್ವತವಾಗಿ ಆದೇಶ ಹೊರಡಿಸುವಂತೆ ಮುಂದೆ ಭವಿಷ್ಯದಲ್ಲಿ ಗಣಿಗಾರಿಕೆಗೆ ಒಟ್ಟಾರೆ ಅವಕಾಶ ನೀಡದಂತೆ ತಮ್ಮ ಸಮಿತಿಯಿಂದ ಸರಕಾರಕ್ಕೆ ಶಿಫಾರಸ್ಸು ಮಾಡಬೇಕೆಂದು ಬೆಟಗೇರಿ ರೇಲ್ವೆ ಹೋರಾಟ ಸಮಿತಿ ಪರವಾಗಿ ಅಧ್ಯಕ್ಷ ಗಣೇಶಸಿಂಗ್ ಬ್ಯಾಳಿ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಎಸ್ ವ್ಹಿ ಸುಲಾಖೆ, ಎಂ ಟಿ ಕಬ್ಬಿಣ, ಕೆ. ಆರ್. ಮೇರವಾಡೆ, ಪುಣೇಕರ ಉಪಸ್ಥಿತರಿದ್ದರು.

## ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಾನುವಾರುಗಳಿಗೆ ಕೆಲ ಸಂದರ್ಭದಲ್ಲಿ ಕಂಡು ಬರುವ ಕಾಲು–ಬಾಯಿ ಬೇನೆಯಿಂದ ಸಮಸ್ಯೆ ಎದುರಿಸುವಂತಾಗುತ್ತಿದ್ದು, ಈ ನಿಟ್ಟನಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದ ಅಡಿಯಲ್ಲಿ ಜಾನುವಾರುಗಳಿಗೆ ಉಚಿತವಾಗಿ ಲಸಿಕೆ ಹಾಕುವ ಕಾರ್ಯಕ್ರಮ ನಡೆಯುತ್ತಿದೆ. ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದಲ್ಲಿ ಮಂಗಳವಾರ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದ ಅಡಿಯಲ್ಲಿ ಜಾನುವಾರುಗಳಿಗೆ ಉಚಿತ ಕಾಲು–ಬಾಯಿ ಬೇನೆ ಲಸಿಕೆ ಹಾಕುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸರಕಾರಗಳು ನೀಡುವ ಈ ಯೋಜನೆ ರೈತರಿಗೆ ಹೆಚ್ಚು ಪ್ರಯೋಜಕಾರಿಯಾಗಿದ್ದು, ಸರಿಯಾದ ವೇಳೆಯಲ್ಲಿ ಜಾನುವಾರುಗಳಿಗೆ ಲಸಿಕೆ ದೊರಕಿಸುವದರಿಂದ ರೋಗಗಳನ್ನು ನಿಯಂತ್ರಣ ಮಾಡಬಹುದಾಗಿದೆ. ಇದೀಗ ಲಸಿಕಾ ಕಾರ್ಯಕ್ರಮ ಪ್ರಾರಂಭವಾಗಿದ್ದು, ಮನೆ ಮನೆಗಳಿಗೆ ಬರುವ ಸಿಬ್ಬಂದಿಗಳಿಗೆ ಸಹಕರಿಸಿ ಔಷಧಿಗಳನ್ನು ಹಾಕಿಸುವಂತೆ ಸಲಹೆ ನೀಡಿದರು.

ಮಾಜಿ ಶಾಸಕ ಗಂಗಣ್ಣ ಮಹಾಂತಶೆಟ್ಟರ, ಸುನೀಲ ಮಹಾಂತಶೆಟ್ಟರ ಹಾಗೂ ಪಶುವೈದ್ಯಕೀಯ ಇಲಾಖೆ ಸಿಬ್ಬಂದಿಗಳು, ರೈತರು ಇದ್ದರು.

### ವನ್ಯಜೀವಿ ಸಂರಕ್ಷಣೆಗಾಗಿ ಜಾಗೃತಿ ನಡಿಗೆ ಕಾರ್ಯಕ್ರಮದಲ್ಲಿ ಸಂಸದ ಹಿಟ್ನಾಳ

# ಪರಿಸರ ಸಮತೋಲನಕ್ಕೆ ವನ್ಯಜೀವಿಗಳ ಪಾತ್ರ ಮುಖ್ಯ


■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಪರಿಸರ ಸಮತೋಲನಕ್ಕೆ ವನ್ಯಜೀವಿಗಳ ಪಾತ್ರ ಮುಖ್ಯವಾಗಿದೆ ಎಂದು ಕೊಪ್ಪಳ ಸಂಸದ ಕೆ.ರಾಜಶೇಖರ ಹಿಟ್ನಾಳ ಹೇಳಿದರು.

ಕರ್ನಾಟಕ ಅರಣ್ಯ ಇಲಾಖೆಯ 70ನೇ ವನ್ಯಜೀವಿ ಸಪ್ತಾಹ–2024ರ ಅಂಗವಾಗಿ ಪ್ರಾದೇಶಿಕ ಅರಣ್ಯ ವಿಭಾಗದ ವತಿಯಿಂದ ಮಂಗಳವಾರ ನಗರದ ಶ್ರೀ ಗವಿಮಠದ ಆವರಣದಲ್ಲಿ ಹಮ್ಮಿಕೊಂಡಿದ್ದ ವನ್ಯಜೀವಿ ಸಂರಕ್ಷಣೆಗಾಗಿ ನಡಿಗೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವನ್ಯಜೀವಿ ದೇವರ ಅದ್ಭುತ ಸೃಷ್ಟಿ. ದೇವರು ವಿಶ್ವವನ್ನು ಮನುಷ್ಯರಿಗಾಗಿ ಮಾತ್ರ ಸೃಷ್ಟಿಸಿಲ್ಲ. ಮನುಕುಲಕ್ಕೆ ಪ್ರಕೃತಿಯ ಕೊಡುಗೆಯಾದ ವನ್ಯಜೀವಿಗಳು ಭೂಮಿಯ ಪರಿಸರ ಸಮತೋಲನ ಕಾಪಾಡುವಲ್ಲಿ ನಿರಂತರವಾಗಿ ಸಹಾಯ ಮಾಡುತ್ತಿವೆ. ಎಲ್ಲಾ ಜೀವಿಗಳ ನಡುವೆ ಆರೋಗ್ಯಕರ ಪರಿಸರ ಸಮತೋಲನ ಕಾಪಾಡಿಕೊಳ್ಳಲು ವನ್ಯಜೀವಿ ಸಂರಕ್ಷಣೆ ಮುಖ್ಯವಾಗಿದೆ. ಈ ಹಿನ್ನೆಲೆಯಲ್ಲಿ ವನ್ಯಜೀವಿಗಳ ರಕ್ಷಣೆಯಾಗಬೇಕು. ಇಂದಿನ ಮಕ್ಕಳು ಈ ದೇಶದ ಭವ್ಯ ಪ್ರಜೆಗಳಾಗಿದ್ದು, ಮಕ್ಕಳು ವನ್ಯಜೀವಿಗಳ ಬಗ್ಗೆ ವಿಶೇಷ ಕಾಳಜಿಹೊಂದಬೇಕು ಹಾಗೂ ಪರಿಸರ ರಕ್ಷಣೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾಧಿಕಾರಿ ನಲಿನ್ ಅತುಲ್ ಮಾತನಾಡಿ, ವನ್ಯಜೀವಿ ಅಥವಾ ವನ್ಯಜೀವಿಗಳ ಒಂದು




### ಸೆಲ್ಫಿ ಪಾಯಿಂಟ್

> ವನ್ಯಜೀವಿ ಸಂರಕ್ಷಣೆಯ ಬಗ್ಗೆ ಜಾಗೃತಿ ಸಂದೇಶವಿರುವ ಸೆಲ್ಫಿ ಪಾಯಿಂಟ್ ಇಡಲಾಗಿತ್ತು. ಗಣ್ಯರು, ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಸೆಲ್ಫಿ ಪಾಯಿಂಟ್ ಮೂಲಕ ಫೋಟೋ ತೆಗೆಸಿಕೊಂಡರು.

ಭಾಗವು ಈ ಭೂಮಿಯಿಂದ ಕಣ್ಮರೆಯಾಗಲು ನಾವು ಬಿಡಬಾರದು. ಪ್ರಕೃತಿಯು ತನ್ನದೇ ಆದ ಸಮತೋಲನ ಕಾಯ್ದುಕೊಳ್ಳುತ್ತದೆ. ಜಿಲ್ಲೆಯಲ್ಲಿ ಕರಡಿದಾಮ ಹಾಗೂ ತೋಳದಾಮಗಳು ಇವೆ. ಅಲ್ಲದೇ ವಿವಿಧ ಬಗೆಯ ಪಕ್ಷಿಗಳನ್ನು ನಾವು

### ವನ್ಯಜೀವಿ ಸಂರಕ್ಷಣೆಗಾಗಿ ಜಾಗೃತಿ ನಡಿಗೆ

> ವನ್ಯಜೀವಿ ಸಂರಕ್ಷಣೆಗಾಗಿ ಜಾಗೃತಿ ನಡಿಗೆಯು ಶ್ರೀ ಗವಿಮಠದಿಂದ ಆರಂಭಗೊಂಡು ಬಸವೇಶ್ವರ ವೃತ್ತ (ಗಂಜ್ ಸರ್ಕಲ್), ಅಶೋಕ ಸರ್ಕಲ್, ಬಸ್‌ನಿಲ್ದಾಣದ ಮಾರ್ಗವಾಗಿ ಗದಗ ರಸ್ತೆಯ ಜಿಲ್ಲಾ ಕ್ರೀಡಾಂಗಣದವರೆಗೆ ನಡೆಯಿತು.

ಇಲ್ಲಿ ಕಾಣಬಹುದಾಗಿದೆ. ಇವುಗಳ ಬಗ್ಗೆ ಜನರಿಗೆ ತಿಳಿಸಬೇಕು. ವನ್ಯಜೀವಿಗಳ ಬಗ್ಗೆ ಅರಿವು ಮೂಡಿಸಲು ಅರಣ್ಯ ಇಲಾಖೆಯು ಈ ವಿಶೇಷ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದರು.

ಪ್ರಾದೇಶಿಕ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಕಾವ್ಯ ಚತುರ್ವೇದಿ ಮಾತನಾಡಿ, ಇಂದಿನ ಪರಿಸ್ಥಿತಿಯಲ್ಲಿ ಕಾಡು, ವನ್ಯಜೀವಿಗಳ ನಾಶ, ಅರಣ್ಯ ಪ್ರದೇಶ ಒತ್ತುವರಿ, ವನ್ಯಜೀವಿ ಸಂಘರ್ಷ ಮುಂತಾದ ಕಾರಣಗಳಿಂದ ಒತ್ತಡದಲ್ಲಿದ್ದು, ಅರಣ್ಯ ಇಲಾಖೆಯು ಅರಣ್ಯ ಸಂರಕ್ಷಣೆ ಜೊತೆಗೆ ವನ್ಯಜೀವಿಗಳ ಉಳಿವಿಗಾಗಿ ಶ್ರಮಿಸುತ್ತಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸಲು ವನ್ಯಜೀವಿ ಸಪ್ತಾಹ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಜಿ. ಪಂ. ಸಿಇಒ ರಾಹುಲ್ ರತ್ನಂ ಪಾಂಡೇಯ, ಎಸ್ಪಿ ಡಾ.ರಾಮ್ ಎಲ್ ಅರಸಿದ್ದಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಎ.ಹೆಚ್.ಮುಲ್ಲಾ ಸೇರಿದಂತೆ ಇತರೆ ಜಿಲ್ಲೆಯ ಅರಣ್ಯ ಸಿಬ್ಬಂದಿಗಳು, ಶ್ರೀ ಗವಿಸಿದ್ದೇಶ್ವರ ವಸತಿ ನಿಲಯ ಹಾಗೂ ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಗಮನ ಸೆಳೆದ ಸ್ತಬ್ಧ ಚಿತ್ರ

> ವನ್ಯಜೀವಿ ಸಂರಕ್ಷಣೆಗಾಗಿ ಅರಣ್ಯ ಇಲಾಖೆಯಿಂದ ಹಮ್ಮಿಕೊಂಡ ಈ ವಿನೂತನ ಕಾರ್ಯಕ್ರಮದಲ್ಲಿ ವನ್ಯ ಜೀವಿಗಳನ್ನೊಳಗೊಂಡ ಸ್ತಬ್ಧಚಿತ್ರವು ತುಂಬಾ ಆಕರ್ಷಣೀಯವಾಗಿದ್ದು, ಸಾರ್ವಜನಿಕರ ಗಮನ ಸೆಳೆಯಿತು. ಡೊಳ್ಳು ಕುಣಿತ ತಂಡವು ಕಾರ್ಯಕ್ರಮದ ಮೆರಗನ್ನು ಹೆಚ್ಚಿಸಿತು.

## ಸಂಪಾದಕೀಯ

# ಬುಲ್ಡೋಜರ್ ಸಂಸ್ಕೃತಿ ಸಂವಿಧಾನಕ್ಕೆ ಅವಮಾನ

ಉತ್ತರ ಪ್ರದೇಶದಲ್ಲಿ ಈಚೆಗೆ ನಡೆದ ಕೋಮು ಗಲಭೆಯ ನಂತರ, ಒಂದು ಕೋಮಿಗೆ ಸಂಬಂಧಿಸಿದವರ ಕಟ್ಟಡ ನೆಲಸಮಗೊಳಿಸುವ ನೋಟಿಸ್‌ಗೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ಮತ್ತೊಮ್ಮೆ ಕಳವಳ ವ್ಯಕ್ತಪಡಿಸಿದೆ. ಮುಂದಿನ ಆದೇಶದ ವರೆಗೆ ಯಾವುದೇ ಕ್ರಮ ಕೈಗೊಳ್ಳದಂತೆ ಉತ್ತರ ಪ್ರದೇಶ ಸರಕಾರಕ್ಕೆ ಸೂಚನೆಯನ್ನೂ ನೀಡಿದೆ.

ಈ ಹಿಂದೆಯೂ ಉತ್ತರ ಪ್ರದೇಶದ ಬುಲ್ಡೋಜರ್ ಸಂಸ್ಕೃತಿ ಬಗ್ಗೆ ಸುಪ್ರೀಂಕೋರ್ಟ್ ಆಕ್ಷೇಪ ವ್ಯಕ್ತಪಡಿಸಿತ್ತು. ಆರೋಪಿ ಅಪರಾಧಿ ಎಂದು ಸಾಬೀತಾಗುವ ಮುನ್ನವೇ, ಉತ್ತರ ಪ್ರದೇಶ ಸರಕಾರ ತಪ್ಪಿತಸ್ಥರು ಎಂದು ಗುರುತಿಸಲ್ಪಟ್ಟವರಿಗೆ ಸಂಬಂಧಿಸಿದ ಮನೆಗಳನ್ನು ಧ್ವಂಸಗೊಳಿಸುವ ಕೆಲಸಕ್ಕೆ ಮುಂದಾಗಿತ್ತು. ಈ ಬಗ್ಗೆ ಸುಪ್ರೀಂಕೋರ್ಟ್ ತೀವ್ರ ಆಕ್ಷೇಪ ವ್ಯಕ್ತಪಡಿಸಿ, ಕೋರ್ಟ್ ವಿಚಾರಣೆ ನಡೆಸುವ ಮುನ್ನವೇ ಸರಕಾರಗಳು ಅಪರಾಧಿ ಎಂದು ಗುರುತಿಸಿ ಶಿಕ್ಷೆ ನೀಡುವುದು ಯಾವ ನ್ಯಾಯ ಎಂದು ಪ್ರಶ್ನಿಸಿತ್ತು.

ಇಷ್ಟಾದರೂ ಉತ್ತರ ಪ್ರದೇಶ ಸರಕಾರ ಮತ್ತೊಮ್ಮೆ ಬುಲ್ಡೋಜರ್ ಸಂಸ್ಕೃತಿ ಪ್ರದರ್ಶನಕ್ಕೆ ಮುಂದಾಯಿತು. ಹೀಗಾಗಿ ಕೋರ್ಟ್ ಎರಡನೇ ಬಾರಿ ಉತ್ತರಪ್ರದೇಶ ಸರಕಾರಕ್ಕೆ ಚಾಟಿ ಬೀಸಿದೆ. ಅತಿಕ್ರಮಣ ತೆರವು ವಿಷಯದಲ್ಲಿ ಸುಪ್ರೀಂಕೋರ್ಟ್ ಮಧ್ಯ ಪ್ರವೇಶಿಸುವುದಿಲ್ಲ. ಆದರೆ ಆರೋಪಿ ಎನ್ನುವ ಕಾರಣಕ್ಕೆ ಕಟ್ಟಡ ತೆರವು ಮಾಡುವುದು ಸರಿಯಾದ ಕ್ರಮ ಅಲ್ಲ ಎಂದು ಉತ್ತರದ ಕೆಲ ರಾಜ್ಯಗಳಲ್ಲಿ ಬುಲ್ಡೋಜರ್ ಸಂಸ್ಕೃತಿಯ ಬಗ್ಗೆ ಸುಪ್ರೀಂ ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿದೆ.

ಈ ಎಲ್ಲ ಬೆಳವಣಿಗೆಗಳನ್ನ ಗಮನಿಸಿದರೆ, ಯಾವ ರಾಜಕೀಯ ಪಕ್ಷಗಳಿಗೆ ಒಕ್ಕೂಟ ವ್ಯವಸ್ಥೆಯಲ್ಲಿ ನಂಬಿಕೆ ಇಲ್ಲವೋ, ಯಾವ ಪಕ್ಷಗಳು ಸಂವಿಧಾನವನ್ನ ಬದಲಾವಣೆ ಮಾಡುತ್ತೇವೆ ಎನ್ನುವ ಚಿಂತನೆ ಹೊಂದಿವೆಯೋ ಅಂಥ ಪಕ್ಷಗಳಿಂದ ಮಾತ್ರ ಇಂಥ ಕೃತ್ಯ ನಡೆಯಲು ಸಾಧ್ಯ.

ಒಕ್ಕೂಟ ವ್ಯವಸ್ಥೆಯಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಿಕೊಳ್ಳುವುದು ಆಯಾ ರಾಜ್ಯಗಳ ಹೊಣೆಗಾರಿಕೆ. ಆದರೂ ಕೆಲವೊಮ್ಮೆ ಪರಿಸ್ಥಿತಿ ಕೈ ಮೀರಿ ಹೋಗುತ್ತದೆ. ಅಪಘಡಗಳು ಸಂಭವಿಸುತ್ತವೆ. ಆಗ ತಪ್ಪಿತಸ್ಥರನ್ನು ಬಂಧಿಸಿ ನ್ಯಾಯಾಲಯಕ್ಕೆ ಒಪ್ಪಿಸುವುದು ಪ್ರತಿಯೊಂದು ರಾಜ್ಯದ ಪೊಲೀಸರ ಕೆಲಸ. ಮುಂದೆ ವಿಚಾರಣೆ ನಡೆಸಿ ತಪ್ಪಿತಸ್ಥರಿಗೆ ಶಿಕ್ಷೆ ಕೊಡುವುದು ನ್ಯಾಯಾಲಯದ ಕೆಲಸ.

ಆದರೆ ಸರ್ಕಾರವೇ ನೇರವಾಗಿ ನ್ಯಾಯದಾನ ವ್ಯವಸ್ಥೆಗೆ ಇಳಿದರೆ ಸಂವಿಧಾನದ ಆಶಯಕ್ಕೆ ಬೆಲೆ ಇಲ್ಲದಂತಾಗುತ್ತದೆ. ಶಾಸಕಾಂಗ ನ್ಯಾಯಾಂಗದ ಕರ್ತವ್ಯ ನಿರ್ವಹಿಸುವುದು ಸಂವಿಧಾನಕ್ಕೆ ಮಾಡುವ ಅಪಚಾರ. ಈ ಕಾರಣಕ್ಕಾಗಿ ಸುಪ್ರೀಂ ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿರುವುದು. ಏನಾದರೂ ಉತ್ತರ ಪ್ರದೇಶ ಸರ್ಕಾರ ಸಂವಿಧಾನಾತ್ಮಕವಾಗಿ ನಡೆದುಕೊಳ್ಳುವುದು ಒಳಿತು.

## ಎ.ಎಂ. ಧಾಲಾಯತರಿಗೆ ಶಿಕ್ಷಣ ಭೀಷ್ಮ' ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಬೆಂಗಳೂರಿನಲ್ಲಿ ಜರುಗಿದ 'ರೂಪ್ಸಾ ಸಂಭ್ರಮ-2024' ಕಾರ್ಯಕ್ರಮವು ಶ್ರೀ ಡಾ. ಮಹೇಶ್ವರ ಮಹಾಸ್ವಾಮಿಗಳು, ವಿಜಯನಗರ ಇವರ ದಿವ್ಯ ಸಾನ್ನಿಧ್ಯದಲ್ಲಿ ಜರುಗಿತು.

ಕಾರ್ಯಕ್ರಮದ ಉದ್ಘಾಟಕರಾಗಿ ಶಿಕ್ಷಣ ಸಚಿವ ಮಧು ಬಂಗಾರಪ್ಪನವರು ಆಗಮಿಸಿದ್ದರು. ವಿಶೇಷ ಅತಿಥಿಗಳಾಗಿ ಎಸ್.ಎಲ್. ಬೋಜೆಗೌಡರು, ಅಧ್ಯಕ್ಷತೆಯನ್ನು ಡಾ. ಹಾಲನೂರ ಲೇಪಾಕ್ಷ ವಹಿಸಿದ್ದರು. ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ ಪ್ರಧಾನ ಕಾರ್ಯದರ್ಶಿ ಶಶಿಧರ ದಿಂಡೂರ, ಬೆಂಗಳೂರು ವಿಶ್ವವಿದ್ಯಾಲಯದ ಸಂಶೋಧಕರಾದ ಡಾ. ಎಸ್.ಟಿ. ಗಿರೀಶ, ರೂಪ್ಸಾ ಕಾರ್ಯಕಾರಿ ಮಂಡಳಿಯ ಎಲ್ಲ ಪದಾಧಿಕಾರಿಗಳು, ಸುಪ್ರೀಂಕೋರ್ಟ್‌ನ ವಕೀಲರಾದ ಸಂಕೇತ ಏಣಗಿ, ಮೂಡಬಿದರಿಯ ಮೋಹನ ಆಳ್ವ ಪಾಲ್ಗೊಂಡಿದ್ದರು.

ಶಿಕ್ಷಣ ಸಚಿವ ಮಧು ಬಂಗಾರಪ್ಪ ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಹಾಲಿ ಶಿಕ್ಷಣ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದವರಿಗೆ 'ಶಿಕ್ಷಣ ಭೀಷ್ಮ ಪ್ರಶಸ್ತಿ' ನೀಡಿ ಸನ್ಮಾನಿಸಿದರು. ಗದಗ ಜಿಲ್ಲೆಯ ರೂಪ್ಸಾ ಕಾರ್ಯದರ್ಶಿ ಎ.ಎಂ. ಧಾಲಾಯತರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಿದರು.


**ಶ್ರೀ ದೊರೆಸ್ವಾಮಿ ವಿರಕ್ತಮಠ ಭೈರನಹಟ್ಟಿ ವತಿಯಿಂದ 'ಕಿತ್ತೂರು ವಿಜಯೋತ್ಸವಕ್ಕೆ ಇನ್ನೂರು' ವಿಚಾರ ಸಂಕೀರ್ಣ, ಸಂವಾದ ಕಾರ್ಯಕ್ರಮದ ಪ್ರಯುಕ್ತ ಲೇಖನ**

# ಭಾರತದ ಮೊದಲ ಮಹಿಳಾ ಸೇನಾನಿ

ಭಾರತ ದೇಶದ ಇತಿಹಾಸದಲ್ಲಿ ಬ್ರಿಟಿಷ್ ಆಡಳಿತಶಾಹಿಯ ವಿರುದ್ಧದ ಹೋರಾಟದ ವೀರಗಾಥೆಯು ಅಮರಗೀತೆಯಾಗಿ ಗುರುತಿಸಲ್ಪಟ್ಟಿದೆ. ಯುರೋಪಿಯನ್‌ರ ಆಕ್ರಮಣದ ವಿರುದ್ಧ ಸ್ವಾಭಿಮಾನಿಗಳಾಗಿ ಹೋರಾಡಿ ಪ್ರಾಣವನ್ನೇ ತ್ಯಾಗ ಮಾಡಿದ ಲಕ್ಷಾಂತರ ದೇಶಭಕ್ತರ ಬಲಿದಾನ ಆಧುನಿಕ ಭಾರತದ ನಿರ್ಮಾಣದ ಅಡಿಗಲ್ಲು. ಬಲಿದಾನಗೈದವರಲ್ಲಿ ಯುವಕರು ರಾಜ-ಮಹಾರಾಜರು, ವಿದ್ಯಾರ್ಥಿಗಳು, ಬುಡಕಟ್ಟು ಜನಾಂಗದ ವೀರರು ಹೇಗೆ ಗಣ್ಯ ಸ್ಥಾನವನ್ನು ಪಡೆದಿರುವರೋ ಅಷ್ಟೇ ಪ್ರಮುಖ ಪಾತ್ರ ವಹಿಸಿದವರು 'ಮಹಿಳಾ ವೀರರಮಣಿಯರು' ಎಂಬುದು ಸತ್ಯಸ್ಯ ಸತ್ಯ.

16ನೇ ಶತಮಾನದಲ್ಲಿಯೇ ಪೋರ್ಚುಗೀಸರನ್ನು ಹಿಮ್ಮೆಟ್ಟಿಸಿದ ವೀರರಾಣಿ ಅಬ್ಬಕ್ಕ ಹಾಗೂ ರಾಣಿ ಚೆನ್ನಭೈರಾದೇವಿ ಕರ್ನಾಟಕದ ಸಂದರ್ಭದಲ್ಲಿ ಮೊದಲಿಗರು ಎಂಬುದು ಇತಿಹಾಸ. ಆದರೆ ಭಾರತದ ಸ್ವಾತಂತ್ರ್ಯ ಸಂಗ್ರಾಮವನ್ನು ಬ್ರಿಟಿಷರ ವಿರುದ್ಧದ ಹೋರಾಟವೆಂದು ಮುಖ್ಯವಾಗಿ ಪರಿಗಣಿಸಿದರೆ ಇಡೀ ಭಾರತ ದೇಶದಲ್ಲಿಯೇ ಆಂಗ್ಲರನ್ನು ಸದೆಬಡಿದು ಮೊದಲ ವಿಜಯಪತಾಕೆ ಹಾರಿಸಿದ "ಸ್ವಾತಂತ್ರ್ಯ ಸಂಗ್ರಾಮದ ಬೆಳ್ಳಿ ಚುಕ್ಕಿ" ಎಂದೇ ಅಭಿದಾನ ಪಡೆದ ಕನ್ನಡ ನಾಡಿನ ಅಮರ ವೀರಜ್ಯೋತಿ ಕಿತ್ತೂರುರಾಣಿ ಚೆನ್ನಮ್ಮನವರ ಪರಾಕ್ರಮ ಸಾರ್ವಕಾಲಿಕ ದಾಖಲೆ.

ಕ್ರಿ.ಶ. 1585ರಿಂದ ಕ್ರಿ.ಶ. 1829ರವರೆಗೆ "ಗೀಜಗನಹಳ್ಳಿ" ಎಂದು



ಕರೆಯಲ್ಪಡುತ್ತಿದ್ದ ಕಿತ್ತೂರಿನಲ್ಲಿ ತಮ್ಮ ಅಧಿಪತ್ಯ ಸ್ಥಾಪಿಸಿ ಆಳ್ವಿಕೆ ನಡೆಸಿದ ಸಂಪಗಾಂವದ ದೇಸಾಯ ಮನೆತನದ ಇತಿಹಾಸ ಅವಿಸ್ಮರಣೀಯ. ಕಿತ್ತೂರಿನ ಸಂಸ್ಥಾನದಲ್ಲಿ ಆಳ್ವಿಕೆ ನಡೆಸಿದ 12 ಜನ ಅರಸರಲ್ಲಿ ಕ್ರಿ.ಶ. 1782 ರಿಂದ ಕ್ರಿ.ಶ. 1816ರವರೆಗೆ ಪ್ರಭಲ ದೊರೆ ಮಲ್ಲಸರ್ಜದೇಸಾಯಿ ಆಡಳಿತ ನಡೆಸಿದನು. ಈತನಿಗೆ ರುದ್ರಮ್ಮ ಮತ್ತು ಚೆನ್ನಮ್ಮ ಎಂಬ ಇಬ್ಬರು ಹೆಂಡತಿಯರಿದ್ದರು. ಮಲ್ಲಸರ್ಜನ ಪ್ರಾಬಲ್ಯ ಕಂಡು ಅಸೂಯೆಗೊಂಡು ಪೇಶ್ವೆ ಬಾಜಿರಾಯನು ರಾಜದ್ರೋಹಿಗಳ ಸಹಾಯದಿಂದ ಮಲ್ಲಸರ್ಜನನ್ನು ಬಂಧಿಸಿ ಮುಧೋಳಕರ ವಾಡೆಯಲ್ಲಿಟ್ಟನು.

ಕ್ರಿ.ಶ. 1816ರಲ್ಲಿ ಅನಾರೋಗ್ಯದಿಂದ ಜರ್ಜರಿತನಾಗಿ ಮಲ್ಲಸರ್ಜದೇಸಾಯಿ ಅಸುನೀಗಿದನು. ತರುವಾಯ ರುದ್ರಮ್ಮನ ಮಗ ಶಿವಲಿಂಗರುದ್ರ ಸರ್ಜನುಕಿತ್ತೂರು ಸಂಸ್ಥಾನದ ಪಟ್ಟಕ್ಕೆ ಬಂದನು. ಶಿವಲಿಂಗ ರುದ್ರಸರ್ಜನಿಗೆ ಗಂಡು ಸಂತಾನವಿಲ್ಲದ್ದರಿಂದ ಈತನು ದತ್ತು ಪಡೆದುಕೊಂಡ ಪ್ರಕರಣದಿಂದ ಬ್ರಿಟಿಷ್ ಮತ್ತು ಇವರ ನಡುವಿನ ಸಂಘರ್ಷದಿಂದಾಗಿ ಉಂಟಾದ ಕಿತ್ತೂರು

> 'ಈ ದೇಶ ನನ್ನದು ನನ್ನದು
> ನನ್ನದು ಈ ನಾಡು
> ಎನ್ನದವನ ಎದೆ ಸುಡಗಾಡು'
> -ಡಾ. ದ.ರಾ. ಬೇಂದ್ರೆ

ಕ್ರಾಂತಿಯ ನಾಯಕತ್ವವನ್ನು ವೀರರಾಣಿ ಚೆನ್ನಮ್ಮಾಜಿಯವರೇ ವಹಿಸಿ ಸ್ವತಃ ಯುದ್ಧಭೂಮಿಯಲ್ಲಿ ಹೋರಾಡಿದರು. ಕ್ರಿ.ಶ. 1824ರಲ್ಲಿ ಅಕ್ಟೋಬರ್ 23ರಂದು ರಾಣಿ ಚೆನ್ನಮ್ಮಾಜಿಯವರು ನಡೆಸಿದ ಐತಿಹಾಸಿಕ ಕಾಳಗದಲ್ಲಿ ಕಲೆಕ್ಟರ್, ಥ್ಯಾಕರೆ, ಫಿರಂಗಿ ದಳದ ಅಧಿಕಾರಿಗಳಾದ ಕ್ಯಾ. ಬ್ಲಾಕ್ ಹಾಗೂ ಡೆಟನ್ ಕೊಲ್ಲಲ್ಪಟ್ಟರು. ಕ್ಯಾಪ್ಟನ್ ಸಿವೆಲ್ ಗಾಯಗೊಂಡ ಸ್ಟಿವನ್‌ಸನ್ ಹಾಗೂ ಎಲಿಯಟ್ ಕಿತ್ತೂರಿನ ಬಂಧಿಗಳಾದರು. 'ಕಿತ್ತೂರು ನಾಡು' ವಿಜಯೋತ್ಸವ ಆಚರಿಸಿ ಸಂಭ್ರಮಿಸಿತು.

ಆದರೆ ಕೆಲವೇ ದಿನಗಳಲ್ಲಿ ಬ್ರಿಟಿಷರ ಭೀಕರ ದಾಳಿಗೆ ಕಿತ್ತೂರು ಬ್ರಿಟಿಷರ ವಶವಾಯಿತು. ವೀರರಾಣಿ ಚೆನ್ನಮ್ಮಾಜಿಯವರನ್ನು ಹಾಗೂ ಸೊಸೆಯಂದಿರನ್ನು ಬಂಧಿಸಲಾಯಿತು. ಅದರೆ ಚೆನ್ನಮ್ಮಾಜಿಯವರ ಬಲಿಗೈಭಂಟ, ವೀರಪುರುಷ ಸಂಗೊಳ್ಳಿ ರಾಯಣ್ಣನ ನೇತೃತ್ವದಲ್ಲಿ ಹೋರಾಟ ಮುಂದುವರೆಯಿತು. 1830 ಡಿಸೆಂಬರ್ 26ರಂದು ರಾಯಣ್ಣನನ್ನು ಗಲ್ಲಿಗೇರಿಸಲಾಯಿತು. ಭಾರತ ಸರಕಾರವು ಕ್ರಿ.ಶ. 1857ರಲ್ಲಿ ನಡೆದ ಪ್ರಥಮ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಬ್ರಿಟಿಷರ ವಿರುದ್ಧ ಅಪ್ರತಿಮನಾಗಿ ಹೋರಾಡಿದ ಝಾನ್ಸಿರಾಣಿ ಲಕ್ಷ್ಮೀಬಾಯಿ ಅವರನ್ನು ಮೊದಲ ಮಹಿಳಾ ಸೇನಾನಿ ಎಂದು ಘೋಷಿಸಿದೆ. ಅದರೆ ಅವರಿಗಿಂತ 33 ವರ್ಷ ಮೊದಲೇ ಬ್ರಿಟಿಷ್ ಅಧಿಕಾರಿಗಳನ್ನು ಯುದ್ಧದಲ್ಲಿ ಸೋಲಿಸಿ ಆಂಗ್ಲರ ಅಧಿಕಾರಶಾಹಿಯನ್ನು ನಲುಗಿಸಿದ ವೀರರಾಣಿ ಚೆನ್ನಮ್ಮನವರಿಗೆ ಈ ಗೌರವ ಸಲ್ಲಬೇಕು.

ಸ್ವಾತಂತ್ರ್ಯ ಹೋರಾಟದ ಎಲ್ಲ ಹುತಾತ್ಮರೂ ಶ್ರೇಷ್ಠರೇ. ಆದರೆ ಕಾಲಾನುಕ್ರಮಣಿಕೆ ಎಂಬುದು ಇತಿಹಾಸದ ರಚನೆಯ ಆತ್ಮವಾಗಿದೆ. ಕಾಲಾನುಕ್ರಮಣಿಕೆಯಲ್ಲಿ 33 ವರ್ಷಗಳಷ್ಟು ಮೊದಲೇ ಬ್ರಿಟಿಷರ ವಿರುದ್ಧ ಸಮರಗೈದ 'ವೀರರಾಣಿ ಕಿತ್ತೂರು ಚೆನ್ನಮ್ಮನವರ' ಸಂಗ್ರಾಮವು ಕ್ರಿ.ಶ. 1857ರ ಪ್ರಥಮ ಸ್ವಾತಂತ್ರ್ಯ ಸಂಗ್ರಾಮಕ್ಕೆ ಪ್ರೇರಣೆಯಾಯಿತು.

ಈ ಎಲ್ಲ ಐತಿಹಾಸಿಕ ಸಂಗತಿಗಳನ್ನು ಪುರಸ್ಕರಿಸಿ ಭಾರತ ಸರಕಾರವು ವೀರರಾಣಿ ಕಿತ್ತೂರು ಚನ್ನಮ್ಮಾಜಿಯವರನ್ನು ಮೊದಲ ಮಹಿಳಾ ಸ್ವಾತಂತ್ರ್ಯ ಸೇನಾನಿ ಎಂದು ಘೋಷಿಸಬೇಕು ಎಂಬುದು ಸಮಸ್ತ ಕನ್ನಡಿಗರ ಹೃದಯದ ಕೂಗಾಗಿದೆ. ರಾಜ್ಯದ ಸರ್ವ ಸಂಸದರು ಹಾಗೂ ಮಾನ್ಯ ವಿಧಾನ ಮಂಡಲ ಈ ನಿಟ್ಟಿನಲ್ಲಿ ಕೇಂದ್ರ ಸರಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸುವ ಆಶಯದೊಂದಿಗೆ 'ಚೆನ್ನಮ್ಮಾಜಿ'ಯವರಿಗೆ ಗೌರವ ವಂದನೆ ಸಲ್ಲಿಸೋಣ.

**-ಶ್ರೀಮ.ನಿ.ಪ್ರ ಶಾಂತಲಿಂಗ ಸ್ವಾಮಿಗಳು,**
ಶ್ರೀ ದೊರೆಸ್ವಾಮಿ ವಿರಕ್ತಮಠ
ಭೈರನಹಟ್ಟಿ-ಶಿರೋಳ.

**ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ತೋಂಟದ ಸಿದ್ಧರಾಮ ಶ್ರೀಗಳು**

# ಪತ್ರ ಬರವಣಿಗೆ ಕಣ್ಮರೆಯಾಗುತ್ತಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜರ ಕಾಲದಲ್ಲಿ ಹಂಸ ಪಕ್ಷಿಯ ಮೂಲಕ ಸಂದೇಶಗಳು ತಲುಪುತ್ತಿದ್ದವು. ಅದಕ್ಕಾಗಿಯೇ ಹಂಸ ಎಂದರೆ ಅಂಚೆ ಎಂಬ ಹೆಸರು ಬಂದಿದೆ. ಮನುಷ್ಯನ ಅಂತರಾಳದ ಭಾವನೆಗಳನ್ನು ಪ್ರಬಲವಾಗಿ ಅಭಿವ್ಯಕ್ತಿಸುವ ಮಾಧ್ಯಮ ಪತ್ರ. ಇಂತಹ ಪತ್ರ ಬರವಣಿಗೆ ಇಂದು ಕಣ್ಮರೆಯಾಗುತ್ತಿದೆ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2715ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಪೂಜ್ಯರು, ಒಳ್ಳೆಯದೆಲ್ಲವೂ ಶಿವಾನುಭವ. ಅಂಚೆ ಇಲಾಖೆಯು ಸಾಕಷ್ಟು ಯೋಜನೆಗಳು ಲಭ್ಯವಿದ್ದು, ಜನರು ಸದುಪಯೋಗ ಮಾಡಿಕೊಳ್ಳಬೇಕು. ಪತ್ರಗಳು ವಿಮರ್ಶಾತ್ಮಕ ಓದುವಿಕೆ, ಆತ್ಮಾಭಿವ್ಯಕ್ತಿಯ ಬರಹ, ಚರ್ಚಾಸ್ಪದ ಬರಹ ಹೀಗೆ ಉಪಯೋಗಿಸಲಾಗುತ್ತಿತ್ತು. ಮಕ್ಕಳು ತಂದೆಗೆ, ತಾಯಿಗೆ, ಮಾವನಿಗೆ, ಅಣ್ಣನಿಗೆ ಹಾಗೆಯೇ ಕಛೇರಿಗಳಿಗೆ, ಬಿಸಿನೆಸ್‌ಗೆ ಮುಂತಾದವುಗಳಿಗೆ ಯಾವ ರೀತಿ ಬರೆಯಬೇಕು ಎಂಬ ಮಹತ್ವ ತಿಳಿಯುತ್ತಿದ್ದರು. ಬರಹದಲ್ಲಿ



ಅವರ ಭಾವನೆ, ಕ್ಷೇಮ, ಸಮಾಚಾರ, ಎಲ್ಲವೂ ಗೊತ್ತಾಗುತ್ತಿತ್ತು. ಈಗ ಆ ಪತ್ರದ ಸೊಗಸಿಲ್ಲ, 'ಅಂಚೆಯ ಅಣ್ಣ ಬಂದಿಹನು, ಅಣ್ಣನ ಕಾಗದ ತಂದಿಹನು' ಎಂಬ ಹಾಡುಗಳು ಈಗಿಲ್ಲ. ಎಲ್ಲಾ ಇ-ಮೇಲ್, ಎಸ್‌ಎಂಎಸ್, ವಾಟ್ಸಪ್ ಇವುಗಳ ಮಧ್ಯೆ ಬರವಣಿಗೆ ಕಮರಿದೆ ಎಂದರು.

ವಿಶ್ವ ಮತ್ತು ರಾಷ್ಟ್ರೀಯ ಅಂಚೆ ದಿನಾಚರಣೆ ನಿಮಿತ್ಯ ಉಪನ್ಯಾಸಕರಾಗಿ ಆಗಮಿಸಿದ ಗದುಗಿನ ಅಂಚೆ ಇಲಾಖೆಯ ಅಧೀಕ್ಷಕರಾದ ಜಯದೇವ ಕಡಗಿ ಮಾತನಾಡಿ, ಅಂಚೆ ಇಲಾಖೆಯಲ್ಲಿ ಸಿಗುವ 32 ಸೌಲಭ್ಯಗಳ ಬಗ್ಗೆ ವಿವರಿಸಿದರು. ಅವುಗಳನ್ನು ಹೇಗೆ ಪಡೆಯಬೇಕು ಎಂಬ ಮಾಹಿತಿಯನ್ನು ಸವಿಸ್ತಾರವಾಗಿ ತಿಳಿಸಿದರು.

ಗದಗ ಜಿಲ್ಲೆಯಲ್ಲಿ ಅತ್ಯುತ್ತಮ ಅಂಚೆ ಸೇವಕರಾಗಿ ಕಾರ್ಯನಿರ್ವಹಿಸಿದ ವೀರಪ್ಪ ಚನ್ನಬಸಪ್ಪ ಕುಪ್ಪಸ್ತ ಹಾಗೂ ಶಿವಲೀಲಾ ಅಶೋಕ್ ಸರ್ವಿ ಇವರನ್ನು ಸನ್ಮಾನಿಸಲಾಯಿತು. ಕರ್ನಾಟಕ ಕೃಷಿ ವಿಶ್ವವಿದ್ಯಾಲಯ ಧಾರವಾಡದಿಂದ ಶ್ರೇಷ್ಠ ಕೃಷಿ ಮಹಿಳೆ ಪ್ರಶಸ್ತಿ ಪಡೆದ ಶಿಲ್ಪಾ ರಮೇಶ್ ಕುರಿಯವರನ್ನು ಸನ್ಮಾನಿಸಲಾಯಿತು.

ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ಇವರು ಸಂಗೀತ ಸೇವೆ ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ಚಂದನಾ ಎಸ್.ದಂಡಿನ ಹಾಗೂ ವಚನ ಚಿಂತನವನ್ನು ಸೃಷ್ಟಿ ಎನ್.ಸುಳ್ಳದ ನೆರವೇರಿಸಿದರು. ದಾಸೋಹ ಸೇವೆಯನ್ನು ಗವಿಸಿದ್ದಪ್ಪ ರಾಚಯ್ಯ ಪತ್ರಿಮಠ ಹಾಗೂ ಸಿದ್ದಲಿಂಗಪ್ಪ ಕಾತರಕಿ ಮತ್ತು ಕುಟುಂಬವರ್ಗದವರು ವಹಿಸಿದ್ದರು. ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತ ಕೋರಿದರು. ವಿದ್ಯಾವತಿ ಪ್ರಭು ಗಂಜಿಹಾಳ ನಿರೂಪಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಉಮೇಶ ಪುರದ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮಶೇಖರ ಪುರಾಣಿಕ, ನಾಗರಾಜ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿ ಚೇರಮನ್ ಐ.ಬಿ. ಬೆನಕೊಪ್ಪ, ಶಿವಾನಂದ ಹೊಂಬಳ ಉಪಸ್ಥಿತರಿದ್ದರು.

> ಇಂದು ಅಂಚೆ ಅತ್ಯುತ್ತಮವಾಗಿ ಕಾರ್ಯ ಮಾಡುತ್ತಿದೆ. ಅಂಚೆ ಬ್ಯಾಂಕುಗಳಿಗೆ ಸರಿಸಮಾನವಾಗಿ ಕಾರ್ಯನಿರ್ವಹಿಸುತ್ತಿದೆ. ಬ್ಯಾಂಕಿನ ಎಲ್ಲಾ ಸೇವೆಗಳನ್ನು ಅಂಚೆ ಇಲಾಖೆಯಲ್ಲಿ ಪಡೆಯಬಹುದು. ಆದರೆ ಅಂಚೆಯ ಎಲ್ಲಾ ಸೇವೆಗಳನ್ನು ಬ್ಯಾಂಕಿನಲ್ಲಿ ಪಡೆಯಲಾಗುವುದಿಲ್ಲ. ಪ್ರಾಚೀನ ಕಾಲದಿಂದಲೂ ಅಂಚೆಯ ಸಂದೇಶ ಉತ್ತಮವಾಗಿ ಸಾಗಿ ಬಂದಿದೆ ಹಾಗೂ ವಿವಿಧ ಸೌಲಭ್ಯಗಳನ್ನು ಪ್ರಾಮಾಣಿಕವಾಗಿ ನಿರ್ವಹಿಸುತ್ತಿದೆ ಎಂದು ಶ್ರೀಗಳು ನುಡಿದರು.

# ಲಿಂ. ತೋಂಟದ ಶ್ರೀಗಳ ಪುಣ್ಯಸ್ಮರಣೋತ್ಸವ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಲಿಂ. ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಕನ್ನಡ ನಾಡಿನ ಭಾಷೆ, ನೆಲ, ಜಲ, ಪರಿಸರ ಉಳಿಸಿ ಬೆಳೆಸುವ ಕಾರ್ಯಕ್ಕೆ ಸದಾ ಕಾಲ ಮುಂದಾಗಬೇಕು ಎನ್ನುವ ಹಿನ್ನೆಲೆಯಲ್ಲಿ ಭಕ್ತರನ್ನು ತಮ್ಮ ಹರಿತವಾದ ಮಾತಿನ ಮೂಲಕ ಎಚ್ಚರಿಸುತ್ತಿದ್ದರು ಎಂದು ಡಾ.ಜಗದ್ಗುರು ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಡಂಬಳ ಗ್ರಾಮದ ಜಮಾಲಶಾವಲಿ ಶರಣರ ದರಗಾದ ಆವರಣದಲ್ಲಿ ಅಂಜುಮನ್ ಇಸ್ಲಾಂ ಕಮಿಟಿ ಮತ್ತು ದರಗಾ ಸಮಿತಿಯು ಹಮ್ಮಿಕೊಂಡಿದ್ದ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ 6ನೇ ವರ್ಷದ ಪುಣ್ಯಸ್ಮರಣೋತ್ಸವದಲ್ಲಿ ಅವರು ಮಾತನಾಡುತ್ತಿದ್ದರು.

ಲಿಂ.ಡಾ.ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳು ಎಲ್ಲಾ ಧರ್ಮದವರ ಮೇಲೆ ಮಮತೆ ಹೊಂದಿದ್ದರು. ವಿಶೇಷವಾಗಿ, ಜಾತ್ರಾ ಮಹೋತ್ಸವದಲ್ಲಿ



ಜಾತಿ-ಮತ-ಪಂಥ ತೊಡೆದು ಹಾಕಲು ದೂರದೃಷ್ಟಿಕೋನದ ರೊಟ್ಟಿ ಜಾತ್ರಾಮಹೋತ್ಸವ ಆಚರಿಸುವುದರ ಮೂಲಕ ಸಾಮಾಜಿಕ ಜಾಢ್ಯಗಳನ್ನು ಹೊಡೆದೋಡಿಸಿ ಬಸವಣ್ಣನವರ ತತ್ವಗಳನ್ನು ಸಾರಿದ್ದಾರೆ. ಪರಮ ಪೂಜ್ಯ ಗುರುಗಳ ಕಾರ್ಯ ಸದಾ ಸ್ಮರಣೀಯವಾದದ್ದು. ಮುಸ್ಲಿಂ ಸಮಾಜದವರು ಪ್ರತಿ ವರ್ಷವು ಅವರ ಪುಣ್ಯಸ್ಮರಣೋತ್ಸವ ಆಚರಿಸುವುದರ ಮೂಲಕ ಅವರ ವಿಚಾರ ಕಾರ್ಯಗಳಿಗೆ ಅರ್ಥ ನೀಡುತ್ತಿರುವುದು ಪ್ರಶಂಸನೀಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಭೈರನಹಟ್ಟಿ ಮತ್ತು ಶಿರೋಳದ ಶಾಂತಲಿಂಗ ಮಹಾಸ್ವಾಮಿಗಳು, ಮುಸ್ಲಿಂ ಸಮಾಜದ ಧರ್ಮಗುರುಗಳಾದ ಖಾದರಸಾಬ ಮುಲ್ಲಾ, ಅಂಜುಮನ್ ಸಮ್ಮಿ ಅಧ್ಯಕ್ಷ ಬಶೀರಹಮ್ಮದ ತಾಂಬೋಟಿ, ಮಾಜಿ ಸಚಿವ ಎಸ್.ಎಸ್. ಪಾಟೀಲ್, ವಿ.ಎಸ್. ಯರಾಶಿ, ಶಫೀಕ ಮೂಲಿಮನಿ, ಬಸುರಡ್ಡಿ ಬಂಡಿಹಾಳ, ಭೀಮಪ್ಪ ಗದಗಿನ, ಖಾಜಾಹುಸೇನ ಹೊಸಪೇಟೆ, ಮಹೇಶ ಗಡಗಿ, ಶರಣು ಬಂಡಿಹಾಳ, ಚಂದ್ರು ಯಳ್ಳಮಲ್ಲಿ, ಜಾಕೀರ ಮೂಲಿಮನಿ, ಮುರ್ತುಜಾ ಮನಿಯಾರ, ಬುಡ್ನೆಸಾಬ ಅತ್ತಾರ, ಬಾಬುಸಾಬ ಮೂಲಿಮನಿ, ಡಿ.ಡಿ. ಸೊರಟೂರ, ಜಂದಿಸಾಬ ಸರಕಾವಾಸ, ಬಾಬುಸಾಬ ಸರಕಾವಾಸ, ಗೌಸುಸಾಬ ಆಲೂರ, ಅಲ್ಲಾವುದ್ದೀನ ಹೊಂಬಳ, ಹುಸೇನಸಾಬ ದೊಡ್ಡಮನಿ, ಸದ್ದಾಂ ರಜಕ್ಕನವರ ಸೇರಿದಂತೆ ಸಮಾಜದ ಹಿರಿಯರು ಇದ್ದರು.

**ವಿಶ್ವಕರ್ಮ ಸಮಾಜದ ಪದಾಧಿಕಾರಿಗಳ ಆಯ್ಕೆ**

# ಸಮಾಜದ ಸಂಘಟನೆಗೆ ಕೈಜೋಡಿಸಿ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ವಿಶ್ವಕರ್ಮ ಸಮಾಜದ ಬಾಂಧವರು ಎಲ್ಲರೂ ಒಗ್ಗಟ್ಟಾಗಿ ಸಮಾಜ ಸಂಘಟಿಸುವ ಕಾರ್ಯಕ್ಕೆ ಕೈಜೋಡಿಸಬೇಕು ಎಂದು ಗುರುಮೂರ್ತಿ ಬಡಿಗೇರ್ ಹೇಳಿದರು.

ಜಿಲ್ಲೆಯ ಯಲಬುರ್ಗಾ ಪಟ್ಟಣದ ದ್ಯಾಮಮ್ಮ ದೇವಿ ದೇವಸ್ಥಾನದಲ್ಲಿ ಇತ್ತೀಚೆಗೆ ನಡೆದ ಯಲಬುರ್ಗಾ ತಾಲೂಕ ಮಟ್ಟದ ವಿಶ್ವಕರ್ಮ ಸಮಾಜದ ಪದಾಧಿಕಾರಿಗಳ ಆಯ್ಕೆ ಕಾರ್ಯಕ್ರಮದಲ್ಲಿ ನೂತನವಾಗಿ ಆಯ್ಕೆಯಾದ ತಾಲೂಕ ಗೌರವಾಧ್ಯಕ್ಷರಾದ ಗುರುಮೂರ್ತಿ ಬಡಿಗೇರ್ ಸಾಕಿನ್ ದಮ್ಮೂರ್ ರವರು ಮಾತನಾಡಿ, ವಿಶ್ವಕರ್ಮ ಸಮಾಜದಲ್ಲಿ ಒಗ್ಗಟ್ಟು ಬಹಳ ಮುಖ್ಯ. ಸಮಾಜವನ್ನು ಮುನ್ನಡೆಸಿಕೊಂಡು ಹೋಗುವವರೆಗೆ ಎಲ್ಲರೂ ಸಹಕಾರ ನೀಡಬೇಕಾಗಿದೆ, ಸಮಾಜ ಸಂಘಟಿಸುವವರಲ್ಲಿ ಸ್ವಾರ್ಥ



ಭಾವನೆ ಇರಬಾರದು, ಹಾಗೂ ಪ್ರತಿಯೊಬ್ಬರು ಸಮಾಜದ ಏಳಿಗೆಗೆ ಶ್ರಮಿಸಬೇಕು ಎಂದರು.

ನೂತನ ತಾಲೂಕ ಅಧ್ಯಕ್ಷರ ಶಂಕ್ರಪ್ಪ ಬಡಿಗೇರ್ ಮಾತನಾಡಿ ಸರ್ಕಾರದ ಸೌಲಭ್ಯಗಳನ್ನ ಸಮಾಜದ ಜನರಿಗೆ ತಿಳಿಸುವ ಕೆಲಸವನ್ನ ಹಾಗೂ ಸೌಲಭ್ಯ ಮುಟ್ಟಿಸುವ ಕೆಲಸವನ್ನು ಪ್ರಾಮಾಣಿಕವಾಗಿ ಮಾಡಬೇಕಾಗಿದೆ, ತಾಲೂಕಿನಲ್ಲಿ ಇರುವ ಸಮಾಜದ ಎಲ್ಲಾ ಜನರ ವಿಶ್ವಾಸಕ್ಕೆ ತೆಗೆದು-ಕೊಂಡು ಸಮಾಜ ಕಟ್ಟುವ ಪ್ರಯತ್ನವನ್ನ ಪ್ರಾಮಾಣಿಕವಾಗಿ ಮಾಡುತ್ತೇವೆ. ವಿಶ್ವಕರ್ಮ ಸಮಾಜದ ವತಿಯಿಂದ ಸಮುದಾಯ ಭವನ ಹಾಗೂ ವಿದ್ಯಾರ್ಥಿಗಳಿಗೆ ಸಿಗಬೇಕಾದ ಸೌಲಭ್ಯಗಳನ್ನ ಅಧಿಕಾರಿಗಳ ಹಾಗೂ ಜನಪ್ರತಿನಿಧಿಗಳ ಗಮನಕ್ಕೆ ತಂದು ಕೊಡಿಸುವ ಕೆಲಸವನ್ನು ಮಾಡುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ವಿಶ್ವಕರ್ಮ ಸಮಾಜದ ಜಿಲ್ಲಾ ಗೌರವಾಧ್ಯಕ್ಷ ಈಶಪ್ಪ ನರಸಾಪುರ, ಜಿಲ್ಲಾ ಸಮಿತಿ ಸದಸ್ಯರು ಸೇರಿದಂತೆ ವಿಶ್ವಕರ್ಮ ಸಮಾಜದ ಮುಖಂಡರು ಉಪಸ್ಥಿತರಿದ್ದರು.


ಬಸವ ಭವನದಲ್ಲಿ ಡಾ. ರಾಜೇಂದ್ರ ಗಡಾದರ ಎರಡು ಗ್ರಂಥಗಳ ಲೋಕಾರ್ಪಣೆಗೊಳಿಸಿದ ಡಾ. ಬಿ.ಎಲ್. ಶಂಕರ್

# ಶರಣ ಸಾಹಿತ್ಯದ ಅಪೂರ್ವ ಕೃತಿಗಳು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು/ಗದಗ

ಡಾ. ಲೀಲಾದೇವಿಯವರು ಸಾಕಷ್ಟು ಏಳು ಬೀಳುಗಳ ಮಧ್ಯೆ ರಾಜಕೀಯ ಸ್ಥಿತಪ್ರಜ್ಞೆ ಕಾಪಾಡಿಕೊಂಡಿದ್ದು, ಅವರ ಜ್ಞಾನಕ್ಕೆ ತಕ್ಕಂತೆ ಸೂಕ್ತ ಸ್ಥಾನಮಾನಗಳು ಸಿಗಲಿಲ್ಲವಾದರೂ ಅವರೊಬ್ಬ ಉತ್ತಮ ಲೇಖಕಿ, ಸಮಾಜ ಕಾರ್ಯಕರ್ತೆಯಾಗಿದ್ದು ಬರಹವನ್ನು ರೂಢಿಸಿಕೊಂಡಿದ್ದರಿಂದಲೇ ಇಂದಿಗೂ ಕ್ರಿಯಾಶೀಲವಾಗಿದ್ದಾರೆ ಎಂದು ಸಂಸ್ಕೃತಿ ಚಿಂತಕ ಡಾ. ಬಿ.ಎಲ್. ಶಂಕರ್ ಅಭಿಪ್ರಾಯಪಟ್ಟರು.

ಬೆಂಗಳೂರಿನ ಬಸವ ಭವನದಲ್ಲಿ ಬೆಂಗಳೂರು ನಗರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಬಸವ ಸಮಿತಿ, ಕದಳಿ ಮಹಿಳಾ ವೇದಿಕೆಗಳು ಏರ್ಪಡಿಸಿದ್ದ ಡಾ. ಲೀಲಾದೇವಿ ಆರ್.ಪ್ರಸಾದ್ ಅಭಿನಂದನಾ ಸಮಾರಂಭದಲ್ಲಿ ಗದಗ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತು ಹಾಗೂ ವಚನ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ, ಕವಿ ವಿಮರ್ಶಕ, ಸಂಶೋಧಕ ಡಾ. ರಾಜೇಂದ್ರ ಎಸ್. ಗಡಾದರು ಬರೆದ ವಚನ ಸಾಹಿತ್ಯ ಸಂಶೋಧನಾ ಲೇಖನಗಳ ಸಂಕಲನ 'ವಚನಾವರಣ' ಹಾಗೂ ಲೇಖಕಿ ಜ್ಯೋತಿ ಎಂ.ಲೋಣಿ ಅವರೊಂದಿಗೆ ಸಂಪಾದಿಸಿದ ಹಿರಿಯ ಸಾಹಿತಿ ಲೀಲಾದೇವಿ ಆರ್.ಪ್ರಸಾದ್ ಅವರ ಆಯ್ದ ಬರಹಗಳ ಸಂಕಲನ 'ಲೀಲಾಂತರಂಗ' ಗ್ರಂಥಗಳ ಬಿಡುಗಡೆಯ ಸಂದರ್ಭದಲ್ಲಿ ಅವರು ಮಾತನಾಡಿದರು.




ಸುತ್ತೂರು ಸಂಸ್ಥಾನ ಮಠದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಹಾಗೂ ಅಥಣಿ ಮೋಟಗಿಮಠದ ಪೂಜ್ಯಶ್ರೀ ಪ್ರಭು ಚನ್ನಬಸವ ಮಹಾಸ್ವಾಮಿಗಳವರ ಸಾನ್ನಿಧ್ಯದಲ್ಲಿ ಗ್ರಂಥ ಲೋಕಾರ್ಪಣೆ ಜರುಗಿತು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ ಸಿ.ಸೋಮಶೇಖರ್ ಮಾತನಾಡಿ, ಈ ಕೃತಿಗಳಲ್ಲಿ ವಚನ ಸಾಹಿತ್ಯ ಹಾಗೂ ಶರಣ ಸಾಹಿತ್ಯದ ಮೇಲೆ ಬೆಳಕು ಚೆಲ್ಲುವ ಅಪರೂಪದ ಲೇಖನಗಳಿದ್ದು ಇದೊಂದು ಸ್ವಾಗತಾರ್ಹ ಸಂಕಲನವಾಗಿದೆ ಎಂದರು.

ಬಸವ ಸಮಿತಿಯ ಅಧ್ಯಕ್ಷರಾದ ಅರವಿಂದ ಜತ್ತಿ ಹಾಗೂ ಸುಮಂಗಲಿ ಸೇವಾಶ್ರಮದ ಸಂಸ್ಥಾಪಕ ಅಧ್ಯಕ್ಷರಾದ ಸುಶೀಲಮ್ಮ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಲೀಲಾದೇವಿ ಪ್ರಸಾದ್ ಅವರ ಕುರಿತು ಮೆಚ್ಚುಗೆ ನುಡಿಗಳನ್ನಾಡಿದರು.

ಸಮಾರಂಭದಲ್ಲಿ ಮಾಜಿ ಸಚಿವೆ ರಾಣಿ ಸತೀಶ್, ಮುಖ್ಯಮಂತ್ರಿಗಳ ಕಾರ್ಯದರ್ಶಿ, ಅಳಂದ ಶಾಸಕರಾದ ಬಿ.ಆರ್. ಪಾಟೀಲ, ಲಂಡನ್ನಿನ ಹಿರಿಯ ವಚನ ವಿದ್ವಾಂಸ ಮಹದೇವಯ್ಯ, ಖ್ಯಾತ ಸಾಹಿತಿಗಳಾದ ಡಾ. ಸರಸ್ವತಿ ಚಿಮ್ಮಲಗಿ, ಡಾ. ನಿರ್ಮಲ ಎಲಿಗಾರ್, ಸಂಶೋಧಕಿ ಡಾ. ಹನುಮಾಕ್ಷಿ ಗೋಗಿ, ಡಾ. ಎಂ.ಎಸ್. ಆಶಾದೇವಿ, ಮಂಜುಳಾ ಶಿವಾನಂದ, ಸಂಕಮ್ಮ ಸಂಕಣ್ಣನವರ, ಹಿರಿಯ ಸಾಹಿತಿಗಳಾದ ರಮೇಶ್ ಸುರ್ವೆ, ಟಿ.ಎಸ್. ನಾಗರಾಜಶೆಟ್ಟಿ, ಅಪ್ಪಾಸಾಹೇಬ ಅಲಿಬಾದಿ, ಎಸ್.ವಿ. ಕಮ್ಮಾರ ಮುಂತಾದವರಿದ್ದರು.

ಸಮಾರಂಭದ ಸಾನ್ನಿಧ್ಯವನ್ನು ವಹಿಸಿದ್ದ ಸುತ್ತೂರು ಸಂಸ್ಥಾನಮಠದ ಶ್ರೀ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಹಾಗೂ ಅಥಣಿ ಮೋಟಗಿಮಠದ ಶ್ರೀ ಪ್ರಭು ಚನ್ನಬಸವಸ್ವಾಮಿಗಳು ಆಶೀರ್ವಚನ ನೀಡಿದರು. ಕರ್ನಾಟಕ ನಾಟಕ ಅಕಾಡೆಮಿಯ ಅಧ್ಯಕ್ಷರಾದ ಕೆ.ವಿ. ನಾಗರಾಜಮೂರ್ತಿ ಸ್ವಾಗತಿಸಿದರು. ವೇದಿಕೆಯ ಮೇಲೆ ಮಾಜಿ ಸಚಿವೆ, ಲೇಖಕಿ ಡಾ. ಲೀಲಾದೇವಿ ಆರ್.ಪ್ರಸಾದ್, ಸಂಕಲನಗಳ ಕರ್ತೃ, ಲೇಖಕ ಡಾ. ರಾಜೇಂದ್ರ ಎಸ್.ಗಡಾದ, ಕದಳಿ ಮಹಿಳಾ ವೇದಿಕೆಯ ಪ್ರೇಮಾ ಗರಡಿ, ಪ್ರೇಮಾ ಸೋಮಸುಂದರ್ ಉಪಸ್ಥಿತರಿದ್ದರು.

## ಫಂಡರಾಪುರಕ್ಕೆ ಕಾರ್ತಿಕ ದಿಂಡಿ ಪಾದಯಾತ್ರೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ದಕ್ಷಿಣ ಕಾಶಿ ಜಲಾಶಂಕರದಲ್ಲಿ ನೂತನವಾಗಿ ಪ್ರತಿಷ್ಠಾಪನೆಗೊಂಡ ಪಾಂಡುರಂಗ ರುಕ್ಮಾಯಿ ಜ್ಞಾನದೇವ ತುಕಾರಾಮರ ಮೂರ್ತಿಗೆ ಮಹಾರುದ್ರಾಭೀಷೇಕ, ಕಾಕಡಾರತಿ, ಹರಿನಾಮ ಭಜನೆ, ಮಂಗಳಾರತಿ ಅದ್ದೂರಿಯಾಗಿ ನಡೆಯಿತು.

ಈ ಭಕ್ತಿ ಸೇವೆಯನ್ನು ನಿವೃತ್ತ ಪಿಎಸ್‌ಐ ಹೆಚ್.ಡಿ. ಪವಾರ ಕುಟುಂಬದವರು ವಹಿಸಿಕೊಂಡಿದ್ದರು. ಪೂಜಾ ಕಾರ್ಯಕ್ರಮವು ಶಿವಾನಂದ ಮಹಾರಾಜರ ನೇತೃತ್ವದಲ್ಲಿ ಜರುಗಿತು. ಜಲಾಶಂಕರ ಅರ್ಚಕರಾದ ಮಲ್ಲಯ್ಯಸ್ವಾಮಿ ಅಂಗಡಿ (ಹಿರೇಮಠ)ರವರು ಪೂಜಾ ಕಾರ್ಯಕ್ರಮವನ್ನು ಅತ್ಯಂತ ಅದ್ದೂರಿಯಾಗಿ ಸಕಲ ವಿಧಿವಿಧಾನಗಳಿಂದ ಜರುಗಿಸಿದರು.

ಸಾಯಂಕಾಲ 4 ಗಂಟೆಗೆ ದಿಂಡಿಪಾದಯಾತ್ರೆಯು ಶ್ರೀ ಫಂಡರಪುರಕ್ಕೆ ಪ್ರಯಾಣ ಬೆಳೆಸಿತು. ಲಕ್ಷ್ಮಣ ಸಂತರು ಕಳಸಾಪೂರ, ಸೋಮನಾಥ ಹವಾಲ್ದಾರ, ಸಂಗಪ್ಪ ಗೆದ್ದಲಮನಿ, ಗುರುನಾಥ ಸಂತರು, ಯಮನಪ್ಪ ಹಿರೇಬೂದಿಹಾಳ, ಯಮನಪ್ಪ ಕಳಸಾಪೂರ, ಸೇರಿದಂತೆ ಅನೇಕ ಸಂತರು, ಭಕ್ತಾಧಿಗಳು ಈ ದಿಂಡಿಯಾತ್ರೆಯಲ್ಲಿ ಪಾಲ್ಗೊಂಡಿದ್ದರು. ಈ ಎಲ್ಲ ಭಕ್ತಾಧಿಗಳಿಗೆ ಪ್ರಸಾದ ಸೇವೆಯನ್ನು ಹೆಚ್.ಡಿ. ಪವಾರ ಹಾಗೂ ಕುಟುಂಬದವರು ನೆರವೇರಿಸಿದರು.

## ಶೀಗಿಹುಣ್ಣಿಮೆಯ ನಿಮಿತ್ತ ಬೆಳಂದಿಗಳ ಊಟ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜೀವಗಾಂಧಿ ನಗರದ ನವನಗರ ಕ್ಷೇಮಾಭಿವೃದ್ಧಿ ಸಂಘ (ಕೆ.ಎಚ್.ಬಿ.) ಕಾಲೋನಿ ಗದಗ ಇವರ ಆಶ್ರಯದಲ್ಲಿ ಶೀಗಿ ಹುಣ್ಣಿಮೆ ನಿಮಿತ್ತ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸದಸ್ಯರು ಸೇರಿ ಶ್ರೀ ಬಸವೇಶ್ವರ ಉದ್ಯಾನವನದಲ್ಲಿ ಶೀಗಿಹುಣ್ಣಿಮೆಯನ್ನು ಆಚರಿಸಿದರು.

ಇದೇ ಸಂದರ್ಭದಲ್ಲಿ ಗದಗ ಚೇಂಬರ್ ಆಫ್ ಕಾಮರ್ಸ್‌ನ ನೂತನ ಅಧ್ಯಕ್ಷರಾದ ತಾತನಗೌಡ ಪಾಟೀಲ, ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಹಾಗೂ ಗದಗ-ಬೆಟಗೇರಿ ವಿರೋಧ ಪಕ್ಷದ ನಾಯಕರಾದ ಎಲ್.ಡಿ. ಚಂದಾವರಿ ಇವರಗಳನ್ನು ಸನ್ಮಾನಿಸಲಾಯಿತು.

ನಿವೃತ್ತ ಶಿಕ್ಷಣಾಧಿಕಾರಿಗಳ ಐ.ಬಿ. ಬೆನಕೊಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು.ಈ ಸಂದರ್ಭದಲ್ಲಿ ಕಾಲೋನಿಯ ಅಧ್ಯಕ್ಷ ಡಿ.ಎಸ್. ತಳವಾರ, ಮಹಾಂತಯ್ಯ ಕಲ್ಮಠ ಸೇರಿದಂತೆ ಬಡಾವಣೆಯ 300 ಜನರ ಪಾಲ್ಗೊಂಡು ಶೀಗೀಹುಣ್ಣಿಮೆಯ ಬೆಳಂದಿಗಳ ಊಟವನ್ನು ಸವಿದು ಶೀಗಿಹುಣ್ಣಿಮೆಯ ಸಂಭ್ರಮದಲ್ಲಿ ಭಾಗಿಯಾದರು.

## ಒಳ ಮೀಸಲಾತಿ ಜಾರಿಗೊಳಿಸುವಂತೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಸುಪ್ರೀಂಕೋರ್ಟ್ ತೀರ್ಪಿನನ್ವಯ ಒಳ ಮೀಸಲಾತಿಯನ್ನು ತಕ್ಷಣವೇ ಜಾರಿಗೆ ತರಬೇಕು, ಒಳಮೀಸಲಾತಿ ಜಾರಿಗೆ ಬರುವವರೆಗೆ ರಾಜ್ಯದಲ್ಲಿ ಯಾವುದೇ ನೇಮಕಾತಿ ಮಾಡಬಾರದೆಂದು ಕರ್ನಾಟಕ ಮಾದಿಗ ಸಂಘರ್ಷ ಸಮಿತಿ ಗದಗ ಜಿಲ್ಲಾಧ್ಯಕ್ಷ ರಾಘವೇಂದ್ರ ಪರಸಪ್ಪ ಪರಾಪೂರ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಘವೇಂದ್ರ ಪರಾಪೂರ, ಮಾದಿಗ ಸಮುದಾಯಕ್ಕೆ ನ್ಯಾಯವಾಗಿ ದೊರಕಬೇಕಾಗಿದ್ದ ಮೀಸಲಾತಿ ಪ್ರಮಾಣ ದೊರೆಯದಾಗಿದೆ. ರಾಜ್ಯದ ಮಾದಿಗ ಸಮಾಜದ ಈ ಒಳಮೀಸಲಾತಿ ಬೇಡಿಕೆಯನ್ನು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಅ.24ರಂದು ನಡೆಯುವ ಸಚಿವ ಸಂಪುಟದಲ್ಲಿ ನಿರ್ಣಯ ತೆಗೆದುಕೊಂಡು ಜಾರಿಗೆ ತರಬೇಕೆಂದು ಆಗ್ರಹಿಸಿದರು.



ತೆಲಂಗಾಣ ಮಾದರಿಯಂತೆ ಕರ್ನಾಟಕದಲ್ಲಿಯೂ ತುಂಬುವ ಎಲ್ಲಾ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ತಡೆ ಹಿಡಿಯಬೇಕು, ಕರ್ನಾಟಕ ಲೋಕಸೇವಾ ಆಯೋಗ ಕರೆದಿರುವ 384 ಗೆಜೆಟೆಡ್ ಪ್ರಬೇಷನರಿ ಹುದ್ದೆಗಳಿಗೆ ಪೂರ್ವಭಾವಿ ಪರೀಕ್ಷೆಯ ಅಧಿಸೂಚನೆ ಹೊರಡಿಸಿರುವ ನೋಟಿಫಿಕೇಷನ್‌ನ್ನು ಕೂಡಲೇ ತಡೆ ಹಿಡಿಯಬೇಕು. ಅದರಂತೆ ರಾಜ್ಯದಲ್ಲಿ ಹೊಸದಾಗಿ ಯಾವುದೇ ನೇಮಕಾತಿಗಳನ್ನು ಒಳಮೀಸಲಾತಿ ಜಾರಿಗೆ ತರುವವರೆಗೆ ನೇಮಕ ಪ್ರಕ್ರಿಯೆಯನ್ನು ಮಾಡಬಾರದು ಇವೇ ಮುಂತಾದ ಬೇಡಿಕೆಗಳೇಡೇರಿಕೆಗಾಗಿಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾದಿಗ ಸಮಾಜದ ಮುಖಂಡರಾದ ಗಣೇಶ್ ಹುಬ್ಬಳ್ಳಿ, ಮಂಜುನಾಥ್ ತೌಜಲ್, ವಿರುಪಾಕ್ಷಿ ಗೌಡರ್, ಮರಿಯಪ್ಪ ಪರಾಪೂರ್, ಪರಶುರಾಮ್ ಸಂಗಾಪೂರ; ಮಂಜುನಾಥ್ ಪರಾಪೂರ್, ಶಿವಾನಂದ್ ಹೇಳವತ್ತಿ, ಮಂಜುನಾಥ ಅಕ್ಕಿ ಉಪಸ್ಥಿತರಿದ್ದರು.

## ರಾಜ್ಯಾಧ್ಯಕ್ಷರಾಗಿ ಶಿರಸಂಗಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಮೈಸೂರಿನ ಕುವೆಂಪು ನಗರದಲ್ಲಿರುವ ಆಶಾದೀಪ ಅಂಗವಿಕಲರ ತರಬೇತಿ ಕೇಂದ್ರದಲ್ಲಿ ಅಂಗವಿಕಲರ ರಾಜ್ಯ ಒಕ್ಕೂಟದ ಮಾಜಿ ರಾಜ್ಯಾಧ್ಯಕ್ಷ ಪಾಲ್ ರಾಮನಾಥನ್ ಅವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಮಟ್ಟದ 3ನೇ ತ್ರೈಮಾಸಿಕ ಸಭೆಯಲ್ಲಿ ನೂತನ ಪದಾಧಿಕಾರಿಗಳ ಚುನಾವಣೆ ಜರುಗಿ, ಒಮ್ಮತದ ಮೇರೆಗೆ ಶಶಿಧರ ಶಿರಸಂಗಿ ಅವರನ್ನು ಅಂಗವಿಕಲರ ರಾಜ್ಯ ಒಕ್ಕೂಟದ ರಾಜ್ಯಾಧ್ಯಕ್ಷ ಹುದ್ದೆಗೆ ಆಯ್ಕೆ ಆಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಪ್ರಾಥಮಿಕ ಶಾಲಾ ಕ್ರೀಡಾಕೂಟ ದನಕನದೊಡ್ಡಿ ಬಾಲಕಿಯರ ಸಾಧನೆ

## ಖೋ ಖೋ ತಂಡ ರಾಜ್ಯ ಮಟ್ಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಪ್ರಸಕ್ತ ಶೈಕ್ಷಣಿಕ ಸಾಲಿನ ಕಲಬುರಗಿ ವಿಭಾಗ ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದಲ್ಲಿ ದನಕನದೊಡ್ಡಿ ಪ್ರಾಥಮಿಕ ಶಾಲೆಯ ಬಾಲಕಿಯರು ಖೋ ಖೋ ಸ್ಪರ್ಧೆಯಲ್ಲಿ ಅದ್ಭುತ ಪ್ರದರ್ಶನ ನೀಡುವ ಮೂಲಕ ವಿಭಾಗ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಇತ್ತೀಚೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ವಿಭಾಗ ಮಟ್ಟದ ಕ್ರೀಡಾಕೂಟದ ಖೋ ಖೋ ಫೈನಲ್ ಪಂದ್ಯದಲ್ಲಿ ಮುಖಾಮುಖಿಯಾದ ಯಾದಗಿರಿ ಹಾಗೂ ಕೊಪ್ಪಳ ತಂಡಗಳ ರೋಚಕ ಹಣಾಹಣಿ ನಡೆಯಿತು, ಪ್ರಥಮ ಪಂದ್ಯದಲ್ಲಿ ಉತ್ತಮ ಪ್ರದರ್ಶನ ನೀಡಿದ ಕೊಪ್ಪಳ ತಂಡವು ಯಾದಗಿರಿ ತಂಡವನ್ನು ಮಣಿಸಿ ರಾಜ್ಯ ಮಟ್ಟಕ್ಕೆ ಲಗ್ಗೆ ಇಟ್ಟಿತು.

ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಬಾಲಕಿಯರ ತಂಡವನ್ನು ಕೊಪ್ಪಳ ಕ್ಷೇತ್ರ ಶಿಕ್ಷಣಾಧಿಕಾರಿ ಶಂಕ್ರಯ್ಯ ಟಿ ಎಸ್, ಕ್ಷೇತ್ರ ಸಮನ್ವಯಾಧಿಕಾರಿ ಪ್ರಕಾಶ್ ತಗಡಿನಮನಿ, ಜಿಲ್ಲಾ ದೈಹಿಕ ಪರಿವೀಕ್ಷಕ ಬಸವರಾಜ್, ತಾಲೂಕು ದೈಹಿಕ ಪರಿವೀಕ್ಷಕ ವೀರಣ್ಣ ಗೌಡ್ರು, ಇಸಿಓ ವೈಶಂಪಾಯನ, ಸಿ.ಆರ್.ಪಿ ಸದಾನಂದ, ಎಸ್‌ಡಿಎಮ್‌ಸಿ ಅಧ್ಯಕ್ಷ ಹುಸೇನಭಾಷಾ, ಗ್ರಾ.ಪಂ ಸದಸ್ಯ ರವಿಕುಮಾರ್ ವಂಟಿಗಾರ್, ಕ್ರೀಡಾ ತರಬೇತಿದಾರರಾದ ಮಲ್ಲಪ್ಪ ವಂಟಿಗಾರ, ಯಮನೂರ ಆಗೋಲಿ, ಹನುಮೇಶ್ ಮೂಲಿಮನಿ, ಗ್ರಾಮದ ಯುವ ಮುಖಂಡರಾದ ಕೃಷ್ಣ ಪತ್ತಾರ್, ವಿರೂಪಾಕ್ಷ ಆಗೋಲಿ, ಫಕೀರಪ್ಪ ಕೋರಿ ಸೇರಿದಂತೆ ಊರಿನ ಗುರು ಹಿರಿಯರು ಅಭಿನಂದಿಸಿದ್ದಾರೆ.

## ದಲಿತರ ಮೇಲಿನ ದೌರ್ಜನ್ಯ ತಡೆ ಜಿಲ್ಲಾಡಳಿತ ವಿಫಲ : ಬಸವರಾಜ್ ಸುಳೇಬಾವಿ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲೆಯಲ್ಲಿ ಇತ್ತೀಚೆಗಷ್ಟೇ ದಲಿತ ಸಮುದಾಯದ ಹಲವರ ಮೇಲೆ ಅನಾವಶ್ಯಕವಾಗಿ ದೌರ್ಜನ್ಯ ಹೆಚ್ಚಾಗುತ್ತಿದೆ ಇದು ತೀವ್ರ ಕಳವಳಕಾರಿ ಸಂಗಾತಿಯಾಗಿದೆ. ಇದಕ್ಕೆ ಜಿಲ್ಲಾ ಆಡಳಿತ ನೇರಹೊಣೆ ಎಂದು ಪ್ರಾತಿಪರ ಹೋರಾಟಗಾರ ಬಸವರಾಜ್ ಸುಳೇಬಾವಿ ಆರೋಪಿಸಿದರು.

ನಗರದ ಕೆಯೂಡಬ್ಲ್ಯೂಜೆ ಪತ್ರಿಕಾ ಭವನದಲ್ಲಿ ರವಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈವರೆಗೆ ಜಿಲ್ಲೆಯಲ್ಲಿ ದಲಿತರ ಮೇಲಿನ ದೌರ್ಜನ್ಯ ಸಂಬಂಧಿಸಿದಂತೆ 51 ಪ್ರಕರಣ ದಾಖಲಾಗಿದೆ, ಅದರಲ್ಲೂ ಪರಿಶಿಷ್ಟ ಜಾತಿ ಮೀಸಲು ವಿಧಾನಸಭಾ ಕ್ಷೇತ್ರದಲ್ಲಿ ಪ್ರಕರಣ ಜರುಗುತ್ತಿವೆ, ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ದಲಿತರ ರಕ್ಷಣೆ ಆಗದಿರುವುದು ಬೇಸರದ ಸಂಗತಿ ಕೂಡಲೇ ಸಚಿವರನ್ನ ಬದಲಾವಣೆ ಮಾಡಬೇಕು, ದೌರ್ಜನ್ಯ ತಡೆಗಟ್ಟುವಲ್ಲಿ ನಿರ್ಲಕ್ಷ ವಹಿಸಿದ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಕೂಡಲೇ ಇಲ್ಲಿಂದ ವರ್ಗಾವಣೆ ಮಾಡಬೇಕೆಂದು ಬಸವರಾಜ್ ಸುಳೆಭಾವಿ ಒತ್ತಾಯಿಸಿದರು.

ಇನ್ನೋರ್ವ ಹೋರಾಟಗಾರ ಅಲ್ಲಮಪ್ರಭು ಬೆಟ್ಟದೂರು ಮಾತನಾಡಿ ಜಮಾಪುರ್ ನಲ್ಲಿ ದಲಿತರ ಮೇಲೆ ದೌರ್ಜನ್ಯ ನಡೆದಿರುವುದು ಖಂಡನೆಯ ವಿಷಯವಾಗಿದೆ ಜಿಲ್ಲೆಯಲ್ಲಿ ಇಂತಹ ದೌರ್ಜನ್ಯ ಪ್ರಕರಣಗಳು ಹೆಚ್ಚಾಗಿ ನಡೆಯುತ್ತಿದೆ ಕೂಡಲೇ ಗೃಹ ಸಚಿವ ಡಾ. ಜಿ ಪರಮೇಶ್ವರ್ ಜಿಲ್ಲೆಗೆ ಭೇಟಿ ನೀಡಬೇಕು ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಹೋರಾಟಗಾರ ಟಿ ರತ್ನಾಕರ್ ಮಾತನಾಡಿ ಗ್ರಾಮ ಸಭೆಯಲ್ಲಿ ದಲಿತ ಯುವಕನ ಮೇಲೆ ದೌರ್ಜನ್ಯ ದಾಂದಲೆ ನಡೆದಿರುವುದು ಇದಕ್ಕೆ ಜಿಲ್ಲಾಡಳಿತ ನೇರ ಹೊಣೆಯಾಗಿದೆ ಎಂದವರು ಗೃಹ ಮಂತ್ರಿ ಜಿಲ್ಲೆಗೆ ಭೇಟಿ ನೀಡುವವರಿಗೆ ತಮ್ಮ ನಿರಂತರ ಹೋರಾಟ ಮುಂದುವರಿಸಲಾಗುವುದು ಎಂದರು.

## ದೌರ್ಜನ್ಯ ತಡೆಗೆ ವಿಶೇಷ ಪೊಲೀಸ್ ಠಾಣೆ ಸ್ಥಾಪಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ದಲಿತರ ಮೇಲಿನ ದೌರ್ಜಗಳನ್ನು ತಡೆಗಟ್ಟಲು ಹಾಗೂ ತ್ವರಿತ ನ್ಯಾಯಕ್ಕಾಗಿ ರಾಜ್ಯದಲ್ಲಿ ವಿಶೇಷ ಪೊಲೀಸ್ ಠಾಣೆಗಳನ್ನು ಪ್ರಾರಂಭಿಸಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ ವಾದ) ಗದಗ ಜಿಲ್ಲಾ ಸಮಿತಿ ವತಿಯಿಂದ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಡಿಎಸ್‌ಎಸ್ (ಅಂಬೇಡ್ಕರವಾದ) ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಲರಾಜ ಅರಬರ ಮಾತನಾಡಿ, ರಾಜ್ಯದಲ್ಲಿ ದಿನನಿತ್ಯ ದಲಿತರ ಮೇಲೆ ಅನೇಕ ದೌರ್ಜನ್ಯಗಳು ನಡೆಯುತ್ತಿವೆ. ಮುಖ್ಯಮಂತ್ರಿಗಳು ಬರುವ ದಿನಗಳಲ್ಲಿ ತಾವು ನಡೆಸುವ ಸಚಿವ ಸಂಪುಟದ ಸಭೆಯಲ್ಲಿ ದಲಿತರ ಮೇಲಿನ ದೌರ್ಜನ್ಯ ತಡೆಗಟ್ಟಲು ದೌರ್ಜನ್ಯ ನಿಯಂತ್ರಣ ಮತ್ತು ತ್ವರಿತ ತನಿಖೆ ಹಾಗೂ ನ್ಯಾಯಕ್ಕಾಗಿ ಜಿಲ್ಲೆಗೊಂದು ಹೊಸ ಪೊಲೀಸ್ ಠಾಣೆ ತೆರೆಯಲು ಸಭೆಯಲ್ಲಿ ಕಡತ ಮಂಡಿಸಿ, ಅನುಮೋದನೆ ಕೊಡಿಸಿ ತ್ವರಿತವಾಗಿ ಪ್ರತ್ಯೇಕ ಪೊಲೀಸ್ ಠಾಣೆಗಳನ್ನು ತೆರೆಯಬೇಕು ಎಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಸಂಘಟನೆ ಸಂಚಾಲಕ ಎಸ್.ಎನ್. ಬಳ್ಳಾರಿ, ಜಿಲ್ಲಾ ಸಂಚಾಲಕ ವೆಂಕಟೇಶಯ್ಯ, ಜಿಲ್ಲಾ ದಸಂಸ ಒಕ್ಕೂಟ ಅಧ್ಯಕ್ಷ ನಾಗರಾಜ್ ಗೋಕಾವಿ, ಪ್ರಕಾಶ್ ಕೆಲೂರು, ವಾಸು ಹುಣಸಿಮರದ, ದೊಡ್ಡ ಹನುಮಂತಪ್ಪ ಕಾಳೆ, ಮುತ್ತಪ್ಪ ಭಜಂತ್ರಿ, ಕೆಂಚಪ್ಪ ಮ್ಯಾಗೇರಿ, ಸಂತೋಷ್ ಬಣಕಾರ, ಗುರುರಾಜ್ ಭಜಂತ್ರಿ, ಮಾರುತಿ ಅಂಗಡಿ, ಮಲ್ಲೇಶ್ ಹೊಸಮನಿ, ರಮೇಶ್ ಚಲವಾದಿ, ಲಕ್ಷ್ಮಣ್ ಸಣ್ಣಕ್ಕಿ, ಕೃಷ್ಣ ಪೂಜಾರ್ ಮುಂತಾದವರು ಉಪಸ್ಥಿತರಿದ್ದರು.

ರೋಟರಿ ಕ್ಲಬ್ ಗದಗ-ಬೆಟಗೇರಿಯಿಂದ ಯಶಸ್ವಿ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ

# 8 ಜನರಿಗೆ ಉಚಿತ ಶಸ್ತ್ರ ಚಿಕಿತ್ಸೆ

■ವಿಜಯಸಾಕ್ಷಿ ಸುದ್ದಿ, , ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ, ರೋಟರಿ ಕ್ಲಬ್ ಗದಗ-ಬೆಟಗೇರಿ ಇವುಗಳ ಸಂಯುಕ್ತಾಶ್ರಯದಲ್ಲಿ ಜರುಗಿದ 196ನೇ ನೇತ್ರ ಶಸ್ತ್ರಚಿಕಿತ್ಸಾ ಶಿಬಿರದಲ್ಲಿ ಎಂಟು ಜನರಿಗೆ ಯಶಸ್ವಿಯಾಗಿ ಕಣ್ಣಿನ ಶಸ್ತ್ರ ಚಿಕಿತ್ಸೆಯನ್ನು ನೆರವೇರಿಸಲಾಯಿತು. ಕಣ್ಣಿನಲ್ಲಿ ಮಸೂರ ಅಳವಡಿಸುವ ಈ ಶಸ್ತ್ರ ಚಿಕಿತ್ಸೆಯನ್ನು ದಿ. ರೊ. ಪ್ರೊ. ಡಾ. ಈರಣ್ಣ ಐ.ಪಟ್ಟಣಶೆಟ್ಟಿ ಇವರ ಸ್ಮರಣಾರ್ಥ ಆಶಾ ಈರಣ್ಣ ಪಟ್ಟಣಶೆಟ್ಟಿ ಮತ್ತು ಮಕ್ಕಳು ಪ್ರಾಯೋಜತ್ವವನ್ನು ವಹಿಸಿದ್ದರು. ಸುಮಾರು 37 ಜನ ರೋಗಿಗಳನ್ನು ತಪಾಸಣೆ ಮಾಡಿ ಶಸ್ತ್ರ ಚಿಕಿತ್ಸೆಗೆ ಯೋಗ್ಯರಾದ 8 ಜನರಿಗೆ ನೇತ್ರ ಶಸ್ತ್ರಚಿಕಿತ್ಸೆಯುನ್ನು ಕೈಗೊಂಡರು.

ಶಸ್ತ್ರ ಚಿಕಿತ್ಸೆಯ ನಂತರ ನಡೆದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷರಾದ ಆಶಾ ಪಟ್ಟಣಶೆಟ್ಟಿಯವರಿಗೆ ಹಾಗೂ ರಾಜು ಪಟ್ಟಣಶೆಟ್ಟಿಯವರಿಗೆ ಧನ್ಯವಾದ ಸಲ್ಲಿಸಿ, ಇನ್ನರ್ ವ್ಹೀಲ್ ಸಂಸ್ಥೆಯ ಅಧ್ಯಕ್ಷರಾದ ನಾಗರತ್ನ ಮಾರನಬಸರಿಯವರು ಸಭೆಯನ್ನುದ್ದೇಶಿಸಿ ಮಾತನಾಡಿ, ಮುಂದಿನ ದಿನಮಾನಗಳಲ್ಲಿ ಸಂಸ್ಥೆಯು ಕೈಗೊಳ್ಳುವ ಸಾಮಾಜಿಕ ಕಾರ್ಯಕ್ರಮದಲ್ಲಿ ತಮ್ಮ ಸಂಸ್ಥೆ ಹಾಗೂ ಆಶಾ ಈರಣ್ಣ ಪಟ್ಟಣಶೆಟ್ಟಿ ಕುಟುಂಬವು ಸಹಾಯ ಮಾಡುವುದಾಗಿ ತಿಳಿಸಿದರು.



ರೋಟರಿ ಸಂಸ್ಥೆಯ ಕಾರ್ಯದರ್ಶಿಗಳಾದ ರೊ. ಸಂತೋಷ ಅಕ್ಕಿ, ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಎಸ್. ಹೊಸಳ್ಳಿಮಠ, ರಾಜು ಪಟ್ಟಣಶೆಟ್ಟಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ರೋಟರಿ ಸಂಸ್ಥೆ ವೆಲ್‌ಫೇರ್ ಸೊಸೈಟಿಯ ಕಾರ್ಯದರ್ಶಿಗಳಾದ ರೊ. ಬಾಲಕೃಷ್ಣ ಕಾಮತ್ ವಂದಿಸಿದರು. ರೋಟರಿ ಸಂಸ್ಥೆಯ ಸದಸ್ಯರಾದ, ರೊ. ಡಾ. ಪ್ರದೀಪ ಉಗಲಾಟ, ರೊ. ವೀಣಾ ತಿರ್ಲಾಪೂರ, ರೊ. ಅಕ್ಷಯ ವ್ಹಿ ಶೆಟ್ಟಿ, ರೊ. ಚನ್ನವೀರ ಹುಣಶಿಕಟ್ಟಿ, ರೊ.ಮಹೇಶ ಹಿಂಡಿ, ರೊ.ವಿಶ್ವನಾಥ ಯಳಮಲಿ, ರೊ. ಹೆಚ್.ಎಸ್ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಶಸ್ತ್ರ ಚಿಕಿತ್ಸಾ ಶಿಬಿರದಲ್ಲಿ ರುದ್ರೇಶ, ನೇತ್ರಾ, ಮಲ್ಲಪ್ಪ ಕುಂಬಾರ, ಜ್ಯೋತಿ ದೊಡ್ಡಮನಿ, ದೀಪಾ, ಆನಂದ ಸಿಂಗ್ರಿ ನೇತ್ರ ಶಸ್ತ್ರ ಚಿಕಿತ್ಸೆ ನಡೆಸಲು ನೆರವಾದರು.

ಐಒಎಲ್ ಚೇರಮನ್ ರೊ.ಶೇಖರ್ ಡಿ.ಸಜ್ಜನರ ಮಾತನಾಡಿ, ದಿ.ರೊ.ಡಾ.ಈರಣ್ಣ ಪಟ್ಟಣಶೆಟ್ಟಿಯವರು ಸಂಸ್ಥೆಯ ಅಧ್ಯಕ್ಷರಾಗಿದ್ದಾಗ ಕೈಗೊಂಡ ಕಾರ್ಯಕ್ರಮಗಳನ್ನು ನೆನಪಿಸಿಕೊಂಡು ಅವರ ಕಾರ್ಯಕ್ರಮಗಳು ಸದಾ ಸಂಸ್ಥೆಯ ಉನ್ನತಿಗೆ ಸಹಕಾರಿಯಾಗಿದ್ದವು ಎಂದರು.

## ತಾಳಬದ್ಧ ಯೋಗಾಸನ ಸ್ಪರ್ಧೆಗಳ ಫಲಿತಾಂಶ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸುವರ್ಣ ಸಂಭ್ರಮ-50ರ ಪ್ರಯುಕ್ತ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಮತ್ತು ಗದಗ ಜಿಲ್ಲಾ ಯೋಗ ಒಕ್ಕೂಟ, ಗದಗ ಜಿಲ್ಲಾ ಅಮೇಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ಗದಗ ಇವರುಗಳ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರ (ಬಸವಪ್ರಭೆ ಕ್ಯಾಂಪಸ್)ನಲ್ಲಿ ಇತ್ತೀಚೆಗೆ ಜರುಗಿದ ಗದಗ ಜಿಲ್ಲಾ ಮಟ್ಟದ ತಾಳಬದ್ಧ (ರಿದಮಿಕ್) ಯೋಗಾಸನ ಸ್ಪರ್ಧೆಗಳ ಫಲಿತಾಂಶ ಈ ಕೆಳಗಿನಂತಿದೆ.

ವೈಯಕ್ತಿಕ ಮಹಿಳೆಯರ ವಿಭಾಗ : ಪ್ರಥಮ-ಲಕ್ಷ್ಮೀ ಬಸರಿ (ಗದಗ), ದ್ವಿತೀಯ- ಶ್ರಾವಣಿ ಗುಡದೂರ (ಗದಗ), ತೃತೀಯ- ಪೂರ್ಣಿಮಾ ಕಟಿಗ್ಗಾರ (ಪಾಪನಾಶಿ).

ವೈಯಕ್ತಿಕ ಪುರುಷರ ವಿಭಾಗ : ಪ್ರಥಮ - ಪ್ರಶಾಂತ ಗಾಣಿಗೇರ (ಗದಗ), ದ್ವಿತೀಯ - ಶಿವಕುಮಾರ ಗುಡ್ಡಿಮಠ (ಗದಗ), ತೃತೀಯ - ಶಶಿಕುಮಾರ ಗುಡ್ಡಿಮಠ (ಗದಗ).

ಗುಂಪು ವಿಭಾಗ (ಮಹಿಳೆಯರು) : ಪ್ರಥಮ- ಗುರುಕುಲ ಯೋಗ ಅಕಾಡೆಮಿ ಪಾಪನಾಶಿ, ದ್ವಿತೀಯ - ನಿತ್ಯಂ ಯೋಗ ಕೇಂದ್ರ ಗದಗ ಬಹುಮಾನ ಪಡೆದುಕೊಂಡರು.

ನಿರ್ಣಾಯಕರಾಗಿ ಚೇತನ ಚುಂಚಾ, ಬೀಸಪ್ಪ ಬಿ., ಸುಮಂಗಲಾ ಹದ್ಲಿ, ಸರಸ್ವತಿ ಕೊಂಡಿಕೊಪ್ಪ ಕಾರ್ಯ ನಿರ್ವಹಿಸಿದರು.

ವಿಜೇತರಾದ ಸ್ಪರ್ಧಿಗಳಿಗೆ ಕರ್ನಾಟಕ ರಾಜ್ಯೋತ್ಸವ ಆಚರಣೆ ಸಮಾರಂಭದಲ್ಲಿ ಬಹುಮಾನ ವಿತರಿಸಲಾಗುವುದು. ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳಿಗೆ, ವಿಜೇತರಿಗೆ, ನಿರ್ಣಾಯಕರಿಗೆ, ಸಂಘಟಕರಿಗೆಲ್ಲರೂ ಬಸವ ಯೋಗ ಕೇಂದ್ರದ ಪ್ರಾಚಾರ್ಯರಾದ ಕೆ.ಎಸ್. ಪಲ್ಲೇದ ಅಭಿನಂದನೆ ತಿಳಿಸಿದ್ದಾರೆ.

### ಜಿಲ್ಲಾ ಪಂಚಾಯತ ಕೆಡಿಪಿ ಸಭೆಯಲ್ಲಿ ಸಚಿವ ಸಂತೋಷ ಲಾಡ್ ಸೂಚನೆ

# ಸರಕಾರಕ್ಕೆ ಬೆಳೆ ಹಾನಿ ಪ್ರಸ್ತಾವನೆ ಸಲ್ಲಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಅತಿಯಾದ ಮಳೆಯಿಂದಾಗಿ, ಮುಂಗಾರಿನ ಫಸಲು ಕೊಯ್ಲು ಹಂತದಲ್ಲಿ ನಾಶವಾಗಿದ್ದು, ಹಿಂಗಾರು ಬಿತ್ತನೆ ಮಾಡಿದ್ದ ಬೀಜಗಳು ಕೊಚ್ಚಿಕೊಂಡು ಹೋಗಿ ನಾಟಿ ಬಂದಿಲ್ಲ. ಆದ್ದರಿಂದ ಈಗಾಗಲೇ ಕೃಷಿ ಇಲಾಖೆಯಿಂದ ಹಿಂಗಾರು ಬಿತ್ತನೆಗೆ ಬೀಜ ಪಡೆದಿದ್ದ ರೈತರಿಗೆ ಮರಳಿ ರಿಯಾತಿಯಲ್ಲಿ ಬಿತ್ತನೆ ಬೀಜ ವಿತರಿಸಲು ಅಗತ್ಯವಿರುವ ಪ್ರಸ್ತಾವನೆಯನ್ನು ಸರಕಾರಕ್ಕೆ ಸಲ್ಲಿಸಬೇಕೆಂದು ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ತಿಳಿಸಿದರು.

ಅವರು ಮಂಗಳವಾರ ಬೆಳಿಗ್ಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ 2024-25ನೇ ಸಾಲಿನ ಸೆಪ್ಟೆಂಬರ್ ಅಂತ್ಯಕ್ಕೆ ಕೊನೆಗೊಂಡ 2ನೇ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅನೇಕ ಇಲಾಖೆಗಳು ತಮಗೆ ನಿಗದಿಪಡಿಸಿದ ಆರ್ಥಿಕ ಮತ್ತು ಭೌತಿಕ ಗುರಿಯನ್ನು ತಲುಪಿದ್ದು, ಇದು ಉತ್ತಮ ಪ್ರಗತಿಯಾಗಿದೆ. ಇನ್ನೂ ಕೆಲವು ಇಲಾಖೆಗಳು ಪ್ರಗತಿಯಲ್ಲಿ ಹಿಂದುಳಿದಿದ್ದು, ಅವರು ಸಹ ನಿಗದಿತ ಗುರಿ ಸಾಧಿಸಬೇಕೆಂದು ಸಚಿವ ಸಂತೋಷ ಲಾಡ್ ಹೇಳಿದರು.

ಅಕ್ಟೋಬರ್ 1ರಿಂದ 14ರವರೆಗೆ ಜಿಲ್ಲೆಯಲ್ಲಿ ಸುರಿದ ಮಳೆಗೆ ಸುಮಾರು 25 ಸಾವಿರ ಹೆಕ್ಟೆಡಿಜಿ ಬೆಳೆ ನಾಶವಾಗಿದ್ದು, ಅಕ್ಟೋಬರ್ 14ರ ನಂತರದ ನಿರಂತರ ಮಳೆಗೆ ಮತ್ತೆ ಬೆಳೆ ಹಾನಿ, ಬಿತ್ತನೆ ಹಾನಿ ಆಗಿದೆ. ಈ ಕುರಿತು ಸರಿಯಾದ ಸಮೀಕ್ಷೆ ಮಾಡಿ, ಸೂಕ್ತ ವರದಿ ಸಲ್ಲಿಸಬೇಕೆಂದು ಸಚಿವರು ಸೂಚಿಸಿದರಲ್ಲದೆ, ಮಳೆ ಹಾನಿ ಸಂದರ್ಭದಲ್ಲಿ ಮನೆ, ಜಮೀನು, ರಸ್ತೆ ಸೇತುವೆ, ಕಟ್ಟಡಗಳನ್ನು ಪರಿಶೀಲಿಸಿ ಸ್ಪಂದಿಸಬೇಕು. ನಿರ್ಲಕ್ಷ್ಯವಹಿಸುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಶಾಸಕ ಎಂ.ಆರ್. ಪಾಟೀಲ ಮಾತನಾಡಿ, ಮಳೆ ನಿರಂತರವಾಗಿರುವದರಿಂದ ಬೆಳೆ ಹಾನಿ ಹೆಚ್ಚಾಗಿದೆ. ಹಿಂಗಾರಿಗಾಗಿ ಬಿತ್ತಿದ್ದ ಬೀಜಗಳು ಕೊಚ್ಚಿ ಹೋಗಿವೆ. ಇವುಗಳ ಮರು ಸಮೀಕ್ಷೆ ಆಗಬೇಕು. ಕೃಷಿ, ತೋಟಗಾರಿಕೆ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಪ್ರತಿ ಜಮೀನುಗಳಿಗೆ ತಪ್ಪದೇ ಭೇಟಿ ನೀಡಿ, ನಿಖರವಾಗಿ ಹಾನಿ ದಾಖಲಿಸಬೇಕೆಂದು ಹೇಳಿದರು.

ಶಾಸಕ ಅಬ್ಬಯ್ಯ ಪ್ರಸಾದ ಮಾತನಾಡಿ, ಮಹಾನಗರದಲ್ಲಿ ನೀರು ಸರಬರಾಜು ಸುಧಾರಿಸಬೇಕು. ಸರಕಾರಿ ಉಪಯೋಗಕ್ಕಾಗಿ ಲ್ಯಾಂಡ್ ಬ್ಯಾಂಕ್ ಸ್ಥಾಪಿಸಬೇಕು. ಬಹಳಷ್ಟು ಸರಕಾರಿ ಯೋಜನೆಗಳಿಗೆ, ಗೃಹ ನಿರ್ಮಾಣಕ್ಕಾಗಿ ಜಮೀನು ಅಗತ್ಯವಿದೆ. ಆರೋಗ್ಯ ಇಲಾಖೆ ಇನ್ನಷ್ಟು ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸಬೇಕೆಂದು ಹೇಳಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮಾತನಾಡಿ, ಮಳೆ ಹಾನಿಯಿಂದ ಮನೆಗಳಿಗೆ, ರಸ್ತೆಗಳಿಗೆ ಹಾನಿಯಾಗಿದೆ. ಕೊಯ್ಲಿಗೆ ಬಂದಿದ್ದ ಈರುಳ್ಳಿ, ಹತ್ತಿ, ಶೇಂಗಾ, ಗೋವಿನ ಜೋಳ ಸೇರಿದಂತೆ ವಿವಿಧ ರೀತಿಯ ಬೆಳೆ ಹಾನಿ ಆಗಿದೆ. ಅಕ್ಟೋಬರ್ 14ರವರೆಗಿನ ಮಳೆಗೆ ಅಂದಾಜು 25 ಸಾವಿರ ಹೆಕ್ಟೆರ್ ಬೆಳೆ ನಾಶವಾದ ವರದಿ ಇತ್ತು. ಈಗಲೂ ಮಳೆ ಮುಂದುವರೆದಿರುವದರಿಂದ ಬೆಳೆಹಾನಿ ಮರು ಸಮೀಕ್ಷೆಗೆ ಆದೇಶಿಸಲಾಗಿದೆ ಎಂದು ಅವರು ಹೇಳಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ರಾಜ್ಯ ಪ್ರಾಧಿಕಾರದ ಉಪಾಧ್ಯಕ್ಷ ಆರ್.ಎಸ್. ಪಾಟೀಲ, ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ, ಉಪ ಪೊಲೀಸ್ ಆಯುಕ್ತ ಮಾನಿಂಗ ನಂದಗಾವಿ, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ ವೇದಿಕೆಯಲ್ಲಿ ಇದ್ದರು. ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ ಸ್ವಾಗತಿಸಿ, ವಂದಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ. ಪ್ರಾಸ್ತಾವಿಕವಾಗಿ ಮಾತನಾಡಿ, 2024-25ನೇ ಸಾಲಿಗೆ ಧಾರವಾಡ ಜಿಲ್ಲಾ ಪಂಚಾಯತಿಗೆ ರೂ.1411 ಕೋಟಿ ಅನುದಾನ ಹಂಚಿಕೆ ಆಗಿತ್ತು. ಸೆಪ್ಟೆಂಬರ್‌ವರೆಗೆ ರೂ.701 ಕೋಟಿ ಅನುದಾನ ಬಿಡುಗಡೆ ಆಗಿತ್ತು. ಬಿಡುಗಡೆ ಆಗಿರುವ ಅನುದಾನದಲ್ಲಿ ರೂ.657 ಕೋಟಿ ವೆಚ್ಚವಾಗಿದ್ದು, ಶೇ.93ರಷ್ಟು ಪ್ರಗತಿ ಆಗಿದೆ. 35,084,26 ವಯಕ್ತಿಕ ಮತ್ತು ಸಮುದಾಯಿಕ ಕಾಮಗಾರಿಗಳ ವಾರ್ಷಿಕ ಭೌತಿಕ ಗುರಿ ಹೊಂದಲಾಗಿತ್ತು, ಇದರಲ್ಲಿ 31,144 ಕಾಮಗಾರಿಗಳನ್ನು ಪೂರ್ಣಗೊಳಿಸಿ, ಶೇ.88.77ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ತಿಳಿಸಿದರು.

### ಮಳೆಯ ವಾತಾವರಣ : ಬೀಜ ಬಿತ್ತನೆಗೆ ಜಂಟಿ ಕೃಷಿ ನಿರ್ದೇಶಕರ ಮಾರ್ಗದರ್ಶನ

# ರೈತ ಬಾಂಧವರಿಗೆ ಸಲಹೆ

■ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲೆಯಲ್ಲಿ ಬಹುತೇಕ ಕಡೆ ಧಾರಾಕಾರ ಮಳೆಯಾಗಿದ್ದು, ಭಾಗಶಃ ಮೋಡ ಕವಿದ ವಾತಾವರಣವಿರಲಿದೆ. ರೈತರು ಬಿತ್ತನೆಗೆ ಅವಸರ ಮಾಡದೇ, ಬಿತ್ತಿದ ಮತ್ತು ಇನ್ನೂ ಬಿತ್ತಬೇಕಾದ ಹೊಲಗಳಲ್ಲಿ ನಿಂತಿರುವ ನೀರನ್ನು ಹೊರ ಹಾಕಬೇಕು. ಮಣ್ಣಿನಲ್ಲಿ ಅತಿಯಾದ ತೇವಾಂಶವಿದ್ದಲ್ಲಿ ಬಿತ್ತುವುದನ್ನು ಮುಂದೂಡಬೇಕು. ಬಿತ್ತುವ ಎಲ್ಲಾ ಬೀಜಗಳನ್ನು ಜೈವಿಕ ಗೊಬ್ಬರಗಳಿಂದ ಬೀಜೋಪಚಾರ ಮಾಡಿ ಬಿತ್ತಬೇಕು.

ಹತ್ತಿ, ಮೆಣಸಿನಗಿಡ, ಕಡಲೆ ಬೆಳೆಗಳಲ್ಲಿ ಹೆಚ್ಚಿನ ತೇವಾಂಶದಿಂದ ಬುಡ ಕೊಳೆ ಬಾಧೆ ತಡೆಯಲು 3ಗ್ರಾಂ/ಲೀ ಕಾರ್ಬೆಂಡೈಜಿಮ್ ಬೆರೆಸಿದ ದ್ರಾವಣವನ್ನು ಬಾಧಿತ ಮತ್ತು ಸುತ್ತಲಿನ ಬೆಳೆಯ ಬುಡಕ್ಕೆ ಸುರಿಯಬೇಕು. ಕುಸುಬೆ ಬಿತ್ತುವ ಮುನ್ನ ಪ್ರತಿ ಕೆ.ಜಿ.ಬೀಜಕ್ಕೆ ಶೇ.2ರ ಕ್ಯಾಲ್ಸಿಯಂ ಕ್ಲೋರೈಡ್‌ನ್ನು ಬೆರೆಸಿ ತಯಾರಿಸಿದ ದ್ರಾವಣದಲ್ಲಿ 8 ತಾಸುಗಳವರೆಗೆ ನೆನೆಸಿ, ನೆರಳಿನಲ್ಲಿ ಒಣಗಿಸಿ, ಬಿತ್ತನೆ ಮಾಡಬೇಕು.

ಹತ್ತಿ ಬೆಳೆಯಲ್ಲಿ ಪೋಷಕಾಂಶ (ಪ್ರತಿ ಲೀ.ನೀರಿನಲ್ಲಿ 6 ಗ್ರಾಂ. 0:52:34 ಮತ್ತು 4 ಗ್ರಾಂ. 19:19:19 ಎನ್.ಪಿ.ಕೆ.) ಮತ್ತು ಶಿಲೀಂಧ್ರನಾಶಕ (ಟಿಲ್ಟ್@ 1 ಮಿ.ಲೀ/ಲೀ) ಸಿಂಪರಣೆ ಮಾಡಬೇಕು. ಎಲೆ ಕೆಂಪಾಗುವುದನ್ನು ನಿಯಂತ್ರಿಸಲು ಪ್ರತಿ ಲೀಟರ ನೀರಿಗೆ 10 ಗ್ರಾಂ. ಮ್ಯಾಗ್ನೀಶಿಯಂ ಸಲ್ಫೇಟ್ ಬೆರೆಸಿ ಸಿಂಪಡಿಸಬೇಕು. ಗುಲಾಬಿ ಕಾಯಿಕೊರಕ ಬಾಧೆ ನಿಯಂತ್ರಿಸಲು ಕೊರಾಜೆನ್(0.4ಮಿ.ಲೀ./ಲೀ) ಅಥವಾ ಡೆಲಿಗೇಟ್ (0.8-0.9ಮಿ.ಲೀ./ಲೀ) ಬಳಸಬಹುದು. ಹತ್ತಿಯಲ್ಲಿ ರಸ ಹೀರುವ ಕೀಟಗಳ ನಿಯಂತ್ರಣಕ್ಕಾಗಿ 0.3 ಗ್ರಾಂ, ಫ್ಲೋನೊಕಾಮಿಡ್ 50% ಫಉ ಅಥವಾ 0.3ಗ್ರಾಂ. ಡೈನೋಟ್ಯೂರಾನ್ 20% ಖಉ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು. ಬಿಳಿನೊಣಗಳ ನಿರ್ವಹಣೆಗೆ 2.0 ಮಿ.ಲೀ ಡೈಫೆಂತಿಯುರಾನ್ 30% + ಪೈರಿಪ್ರಾಕ್ಸಿಫೆನ್ 8% ಎಸ್.ಇ. ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು.

ತೊಗರಿಯಲ್ಲಿ ಕಾಯಿ ಕೊರಕದ ನಿರ್ವಹಣೆಗಾಗಿ ಪ್ರತಿ ಗಿಡದಲ್ಲಿ ಒಂದಕ್ಕಿಂತ ಹೆಚ್ಚು ತತ್ತಿಗಳು ಕಂಡು ಬಂದಲ್ಲಿ, ಪ್ರತಿ ಲೀಟರ ನೀರಿನಲ್ಲಿ ತತ್ತಿ ನಾಶಕಗಳಾದ ಪ್ರೊಫೆನೊಫಾಸ್ 50 ಇ.ಸಿ.@2ಮಿ.ಲೀ./ಲೀ ಬೆರೆಸಿ ಸಿಂಪಡಿಸಬೇಕು.

ಬೆಳೆಗಳ ನಿಯಮಿತ ಪರಿವೀಕ್ಷಣೆ ಕೈಗೊಂಡು, ಕಾಲಕಾಲಕ್ಕೆ ಬೇಕಾಗುವ ಸಸ್ಯ ಸಂರಕ್ಷಣಾ ಕ್ರಮಗಳನ್ನು ಹಾಗೂ ಬೆಳೆಗಳಿಗೆ ಬೇಕಾದ ಪೋಷಕಾಂಶ ನಿರ್ವಹಣೆಯನ್ನು ಕೈಗೊಳ್ಳಲು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಿಂಗಾರಿ ಜೋಳದಲ್ಲಿ ಹೆಚ್ಚಿನ ತೇವಾಂಶದಿಂದ ಸುಳಿ ತಿಗಣೆ ಬಾಧೆ ಕಂಡು ಬಂದಲ್ಲಿ, ನೀರಿನಲ್ಲಿ ಕರಗುವ 19:19:19(ಎನ್.ಪಿ.ಕೆ.)@5ಗ್ರಾಂ, ಲಘು ಪೋಷಕಾಂಶ ಮತ್ತು ಇಮಾಮೆಕ್ಟಿನ್ ಬೆಂಜೋಯೇಟ್@0.5ಗ್ರಾಂ. ಪ್ರತಿ ಲೀಟರ್ ನೀರಿಗೆ ಬೆರೆಸಿ ಸುಳಿಯೊಳಗೆ ಮತ್ತು ಸಮಗ್ರವಾಗಿ ಚೆನ್ನಾಗಿ ಸಿಂಪರಣೆ ಮಾಡಬೇಕು.

### ಅ. 26,27ರಂದು ವಿವಿಧ ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆ

## ಪರೀಕ್ಷಾ ಕೇಂದ್ರಗಳ ಸುತ್ತ ಪ್ರತಿಬಂಧಕಾಜ್ಞೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ (ಸ್ಥಳೀಯ) ವೃಂದದ ವಿವಿಧ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅಕ್ಟೋಬರ್ 26 ಹಾಗೂ 27ರಂದು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುತ್ತಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು, ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಅಕ್ಟೋಬರ್ 26ರಂದು ಜರುಗುವ ಕಡ್ಡಾಯ ಕನ್ನಡ ಪರೀಕ್ಷೆಯ ದಿನದಂದು ಜಿಲ್ಲೆಯ 4 ಪರೀಕ್ಷಾ ಕೇಂದ್ರಗಳಲ್ಲಿ ಮಧ್ಯಾಹ್ನ 1.30 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ಹಾಗೂ ಅಕ್ಟೋಬರ್ 27ರಂದು ಜರುಗುವ ಸ್ಪರ್ಧಾತ್ಮಕ ಪರೀಕ್ಷೆಯ ದಿನದಂದು ಬೆ 8.30 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ಜಿಲ್ಲೆಯ 35 ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚುಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷೆಗಳು ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನು ನಿರ್ಬಂಧಿಸಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರ ಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ.

ಮೊಬೈಲ್/ಸೆಲ್ಯೂಲಾರ್ ಫೋನ್, ಟ್ಯಾಬ್ಲೆಟ್, ಪೆನ್‌ಡ್ರೈವ್, ಬ್ಲೂಟೂಥ್ ಡಿವೈಸ್, ಸ್ಮಾರ್ಟ್ ವಾಚ್, ಕ್ಯಾಲ್ಕುಲೇಟರ್ ಮತ್ತು ಇತರೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ಸ್ ಉಪಕರಣಗಳು ಅಥವಾ ಲಾಗ್ ಟೇಬಲ್ಸ್, ಕೈ ಚೀಲ, ಪರ್ಸ್, ನೋಟುಗಳು, ಚಾರ್ಟ್, ಬಿಡಿ ಹಾಳೆಗಳು ಅಥವಾ ರೆಕಾರ್ಡಿಂಗ್ ವಸ್ತುಗಳನ್ನೂ ಸೇರಿದಂತೆ ಇನ್ನಿತರೆ ಯಾವುದೇ ರೀತಿಯ ಉಪಕರಣಗಳನ್ನು ಪರೀಕ್ಷಾ ಕೇಂದ್ರದೊಳಗೆ ಕೊಂಡೊಯ್ಯುವುದನ್ನು ನಿಷೇಧಿಸಲಾಗಿದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ತಿಳಿಸಿರುವ ವಸ್ತ್ರ ಸಂಹಿತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸಬೇಕೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಗೋವಿಂದರೆಡ್ಡಿ ಅವರು ಆದೇಶ ಹೊರಡಿಸಿದ್ದಾರೆ.

### ಬಿತ್ತಿದ ಬಹುತೇಕ ಬೆಳೆಗಳು ನಾಶ : ಹಾಕಿದ ಬಂಡವಾಳವೂ ಮರಳಿ ಬಾರದ ಭೀತಿ

## ಪರಿಹಾರಕ್ಕೆ ಆಗ್ರಹಿಸಿ ರೈತರ ಮನವಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಂಗಳವಾರ ಶಿರಹಟ್ಟಿ ತಾಲೂಕಿನ ಮಾಗಡಿ, ಕೊಂಚಿಗೇರಿ ಸೇರಿದಂತೆ ವಿವಿಧ ಗ್ರಾಮಗಳ ರೈತರು ಮೊಳಕೆಯೊಡೆದ ಮೆಕ್ಕೆ ಜೋಳದ ತೆನೆಗಳನ್ನು ಹಿಡಿದು ಬೆಳೆಹಾನಿ ಪರಿಹಾರಕ್ಕೆ ಆಗ್ರಹಿಸಿ ತಹಸೀಲ್ದಾರ ಅನಿಲ ಬಡಿಗೇರ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಿಸಾನ್ ಜಾಗೃತಿ ವಿಕಾಸ ಸಂಘದ ಅಧ್ಯಕ್ಷ ಸಂಜೀವ ಹುಡೇದ್, ರೈತ ಮುಖಂಡ ಚನ್ನಪ್ಪ ಷಣ್ಮುಖಿ ಮಾತನಾಡಿ, ಕಳೆದ 15 ದಿನಗಳಿಂದ ತಾಲೂಕಿನಾದ್ಯಂತ ಸತತ ಸುರಿಯುತ್ತಿರುವ ಮಳೆಯಿಂದಾಗಿ ಬಿತ್ತಿದ ಎಲ್ಲ ಬೆಳೆಗಳು ಹಾನಿಯಾಗಿದ್ದು, ಹೊಲಕ್ಕೆ ಹಾಕಿದ ಬಂಡವಾಳ ಮರಳಿ ಬಾರದಂತಾಗಿದೆ. ದುಬಾರಿ ಬೀಜ, ಗೊಬ್ಬರ ಹಾಕಿ ಬೆಳೆದ ಎಲ್ಲ ಬೆಳೆ ಸಂಪೂರ್ಣ ಜಲಾವೃತಗೊಂಡಿದ್ದು, ಸರ್ಕಾರ ಸ್ಥಳ ಪರಿಶೀಲನೆ ನಡೆಸಿ ಸೂಕ್ತ ಪರಿಹಾರ ಒದಗಿಸಬೇಕು. ತಾಲೂಕಿನಲ್ಲಿ ರೈತರು ವರ್ಷವಿಡೀ ಬೆವರು ಸುರಿಸಿ ಕಷ್ಟಪಟ್ಟು ಬೆಳೆದ ಬೆಳೆ ಕಾಡು ಪ್ರಾಣಿ, ಪಕ್ಷಿಗಳ ಪಾಲಾಗುತ್ತಿರುವುದು ಒಂದೆಡೆಯಾದರೆ, ಪೈರು ಬರುವಷ್ಟರಲ್ಲಿ ವಿಪರೀತ ಮಳೆ ಸುರಿದು ಬೆಳೆದ ಬೆಳೆ ಸಂಪೂರ್ಣ ನಾಶವಾಗಿದೆ.

ಕಟಾವಿಗೆ ಬಂದ ಬೆಳೆ ಮಳೆ ನೀರಿನಲ್ಲಿ ಜಲಾವೃತಗೊಂಡು ಕೊಳೆಯುತ್ತಿದೆ. ತಕ್ಷಣ ಅಧಿಕಾರಿಗಳು ಎಚ್ಚೆತ್ತು ರೈತರಿಗೆ ಬೆಳೆಹಾನಿ ಪರಿಹಾರ ನೀಡಬೇಕು. ಅತಿವೃಷ್ಟಿ ಬೆಳೆ ಪರಿಹಾರ ಹಾಗೂ ಬೆಳೆ ವಿಮಾ ಕಂಪನಿಯಿಂದ ಮಧ್ಯಂತರ ಪರಿಹಾರ ದೊರಕಿಸಿಕೊಡುವಲ್ಲಿ ಅಧಿಕಾರಿಗಳು ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ಮನವಿ ಮಾಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಸೀಲ್ದಾರ್ ಅನಿಲ್ ಬಡಿಗೇರ, ರೈತರ ಹಿತ ಕಾಪಾಡಲು ತಾಲೂಕಾಡಳಿತ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ. ಸರ್ಕಾರ ಮತ್ತು ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಕಂದಾಯ, ಕೃಷಿ, ತೋಟಗಾರಿಕೆ ಅಧಿಕಾರಿಗಳ ತಂಡ ಜಂಟಿಯಾಗಿ ಸಮೀಕ್ಷೆ ಕಾರ್ಯ ನಡೆಸಿದ್ದು, ಎರಡು ಮೂರು ದಿನದಲ್ಲಿ ವರದಿ ಸಿದ್ದಪಡಿಸಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಗುವುದು ಎಂದರು.

ಶಿವಪ್ಪ ಸರವಿ, ಶಿವಾನಂದ ಲಿಂಗಶೆಟ್ರ, ಸಂಗಪ್ಪ ನಂದಗಾವಿ, ಖಾನಸಾಬ ಸೂರಣಗಿ, ಚಂದ್ರಶೇಖರ ಬೂದಿಹಾಳ, ಚನ್ನಬಸಪ್ಪ ಹಾವೇರಿ, ಶಿವಾನಂದಪ್ಪ ಹೊಸಮನಿ, ಅಶೋಕ ಸೊರಟೂರ, ದೇವಪ್ಪ ಬಟ್ಟೂರ, ಶಿವರೆಡ್ಡಿ ಗುತ್ತಲ, ಮರಿಯಪ್ಪ ಬಳ್ಳಾರಿ ಮತ್ತಿತರರು ಉಪಸ್ಥಿತರಿದ್ದರು.

## ಮುಸ್ಲಿಂ ವ್ಯಕ್ತಿ ಒಂದಕ್ಕಿಂತ ಹೆಚ್ಚು ವಿವಾಹ ನೋಂದಣಿ ಮಾಡಬಹುದು: ಹೈಕೋರ್ಟ್

■ವಿಜಯಸಾಕ್ಷಿ ಸುದ್ದಿ, ಬಾಂಬೆ

ಮುಸ್ಲಿಂ ವ್ಯಕ್ತಿ ಒಂದಕ್ಕಿಂತ ಹೆಚ್ಚು ವಿವಾಹಗಳನ್ನು ನೋಂದಣಿ ಮಾಡಬಹುದು ಎಂದು ಬಾಂಬೆ ಹೈಕೋರ್ಟ್ ಮಹತ್ವದ ತೀರ್ಪು ಪ್ರಕಟಿಸಿದೆ.

ಮುಸ್ಲಿಂ ವೈಯಕ್ತಿಕ ಕಾನೂನುಗಳಲ್ಲಿ ಒಂದಕ್ಕಿಂತ ಹೆಚ್ಚು ವಿವಾಹವಾಗುವುದಕ್ಕೆ ಅವಕಾಶ ಇರುವುದರಿಂದ ಮುಸ್ಲಿಂ ಸಮುದಾಯಕ್ಕೆ ಸೇರಿದ ವ್ಯಕ್ತಿ ಒಂದಕ್ಕಿಂತ ಹೆಚ್ಚು ವಿವಾಹ ನೋಂದಣಿ ಮಾಡಿಕೊಳ್ಳಲು ಸಾಧ್ಯವಿದೆ ಎಂದು ಹೇಳಿದ್ದು, 3 ನೇ ವಿವಾಹವನ್ನು ನೋಂದಣಿ ಮಾಡಿಕೊಳ್ಳಲು ಅನುಮತಿ ಕೋರಿದ್ದ ವ್ಯಕ್ತಿಯ ಅರ್ಜಿಯನ್ನು ಪುರಸ್ಕರಿಸಿದೆ.


## ಗ್ರಾಮ ಪಂಚಾಯತ ಕಾರ್ಯಾಲಯ ಕೋಟುಮಚಗಿ

ತಾಲೂಕ :-ಗದಗ ಜಿಲ್ಲಾ:-ಗದಗ

ಸಂ.ಗ್ರಾ.ಪಂ ಕೋ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ:-21/10/2024

-: ದರಪಟ್ಟಿ ಪ್ರಕಟಣೆ :-

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕೋಟುಮಚಗಿ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಕೋಟುಮಚಗಿ ಗ್ರಾಮದ ಶರಣಪ್ಪ ನೀರಲಗಿಯವರ ಮನೆಯಿಂದ ಬಾರಕೇರ ಹಿತ್ತಲದವರೆಗೆ ಮನೆಯವರೆಗೆ ಸಿ ಸಿ ನಿರ್ಮಾಣ | 177507 | 500 | |
| 2 | ಕೋಟುಮಚಗಿ ಗ್ರಾಮದ ಈರಪ್ಪ ರಾಮಪ್ಪ ಮನೆಯಿಂದ ಹನಮಂತ ಬಂಡಿವಾಡ ರವರ ಮನೆಯವರೆಗೆ ಸಿ ಸಿ ನಿರ್ಮಾಣ | 146945 | 500 | |
| 3 | ಕೋಟುಮಚಗಿ ಗ್ರಾಮದ ತೋಟಪ್ಪ ನವಲಿ ಯವರ ಮನೆಯಿಂದ ಪಾಯಪ್ಪಗೌಡ ರವರ ಮನೆಯವರೆಗೆ ಸಿ ಸಿ ನಿರ್ಮಾಣ | 61966.52 | 500 | |
| 4 | ಕೋಟುಮಚಗಿ ಗ್ರಾಮ ಸರಕಾರಿಪ್ರಾಥಮೀಕ ಹೆಣ್ಣು ಮಕ್ಕಳ ಶಾಲೆ ಆವರಣದಲ್ಲಿ ಶೌಚಾಲಯ ನಿರ್ಮಾಣ | 146242.25 | 500 | |
| 5 | ಕೋಟುಮಚಗಿ ಗ್ರಾಮದ ರೈಮನಸಾಬ ಹಿರೇಹಾಳ ಮನೆಯಿಂದ ಪಾತೀಮಾ ಮೀರಾನಾಯ್ಕ ಮನೆಯವರೆಗೆ ಸಿ ಸಿ ನಿರ್ಮಾಣ | 137607.80 | 500 | |
| 6 | ಕೋಟುಮಚಗಿ ಗ್ರಾಮದ ರಸ್ತೆಯಿಂದ ಕಲ್ಲನಗೌಡ್ರ ಮನೆಯಿಂದ ಮೇನ ರೋಡ ವರೆಗೆ ರಸ್ತೆ ಅಭಿವೃದ್ಧಿ ಪಡಿಸುವುದು. | 43399.34 | 500 | |
| 7 | ಕೋಟುಮಚಗಿ ಗ್ರಾಮದ ಲಾಡಸಾಬ ಮಸೀದಿಯಿಂದ ಮೇನರೋಡ ವರೆಗೆ ಸಿ ಸಿ ನಿರ್ಮಾಣ | 60303.27 | 500 | |
| 8 | ಕೋಟುಮಚಗಿ ಗ್ರಾಮದ ಗುರಪ್ಪ ಚಿಂಚಲಿ ಮನೆಯಿಂದ ಶೇಖಪ್ಪ ಹೊಣಗೇರಿ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 132330 | 500 | |
| 9 | ಕೋಟುಮಚಗಿ ಗ್ರಾಮದ ದೇವಾನಂದ ಹೊಸಮನಿ ಯವರ ಮನೆಯಿಂದ ರಾಮಣ್ಣ ಆಡಿನವರರವರ ಮನೆಯವರೆಗೆ ಸಿ ಸಿ ನಿರ್ಮಾಣ | 69630.85 | 500 | |
| 10 | ಕೋಟುಮಚಗಿ ಗ್ರಾಮದ ಚನ್ನಪ್ಪ ಅಂಕದ ಮನೆಯಿಂದ ಗದಗ ನರೇಗಲ್ಲ ರೋಡವರೆಗೆ ರಸ್ತೆ ಅಭಿವೃದ್ಧಿ ಪಡಿಸುವುದು. | 91317.60 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 12 | | | | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;-23/10/2024 ರಿಂದ 03/11/2024 ರವರೆಗೆ, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;-05-11-2024 ಮುಂಜಾನೆ 10.00ಗಂಟೆಯಿಂದ ಮಧ್ಯಾಹ್ನ 1.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:-05-11-2024 ರ ಮಧ್ಯಾಹ್ನ 4.00ಗಂಟೆ.

:ನಿಬಂಧನೆಗಳು:

1)ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಕೋಟುಮಚಗಿ ಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/- **ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು** ಗ್ರಾಮ ಪಂಚಾಯತಿ ಕೋಟುಮಚಗಿ

ಸಹಿ ಆಗಿದೆ/- **ಅಧ್ಯಕ್ಷರು** ಗ್ರಾಮ ಪಂಚಾಯತಿ ಕೋಟುಮಚಗಿ



ಕರ್ನಾಟಕ ಸರ್ಕಾರ

## ಗ್ರಾಮ ಪಂಚಾಯತ ಕಾರ್ಯಾಲಯ ಕದಾಂಪೂರ, ತಾಲೂಕ ॥ ಮುಂಡರಗಿ, ಜಿಲ್ಲಾ ॥ ಗದಗ

ಸಂ: ಗ್ರಾ.ಪಂ.ಕ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25/01 ದಿನಾಂಕ : 21/10/2024

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕದಾಂಪೂರ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ಟೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 01 | ಕಪ್ಪತ್ತಗಿರಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಕಂಪೌಂಡ ನಿರ್ಮಾಣ | 291258.11 | 500.00 | ಖಾಲಿ ಟೆಂಡರ್ ಫಾರ್ಮ ಅನ್ನು ಗ್ರಾಮ ಪಂಚಾಯತಿ ಯಿಂದ ಪಡೆದು ಸಲ್ಲಿಸುವುದು |
| 02 | ಕದಾಂಪೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಶೌಚಾಲಯ ನಿರ್ಮಾಣ | 153358.00 | 500.00 | |
| 03 | ಕಪ್ಪತಗಿರಿ ಗ್ರಾಮದ ಪೀರಪ್ಪ ಗೋಲಪ್ಪ ಲಮಾಣಿ ಇವರ ಮನೆಯಿಂದ ರೂಪ್ಲೆಪ್ಪ ಸೋಮ್ಲಪ್ಪ ಇವರ ಮನೆಯವರೆಗೆ ಸಿ ಸಿ ಗಟಾರ ನಿರ್ಮಾಣ | 196513.06 | 500.00 | |
| 04 | ಕಪ್ಪತಗಿರಿ ಗ್ರಾಮದ ಪೀರಪ್ಪ ಗೋಲಪ್ಪ ಲಮಾಣಿ ಇವರ ಮನೆಯಿಂದ ರೂಪ್ಲೆಪ್ಪ ಸೋಮ್ಲಪ್ಪ ಇವರ ಮನೆಯವರೆಗೆ ಸಿ ಸಿ ಗಟಾರ ನಿರ್ಮಾಣ | 126327.5 | 500.00 | |
| 05 | ಕದಾಂಪೂರ ಗ್ರಾಮದ ಗೂಳಪ್ಪ ಸಂಕಣ್ಣವರ ಮನೆಯಿಂದ ಪಾಂಡಪ್ಪ ನಾಗನೂರ ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ | 236434.39 | 500.00 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : **23/10/2024** ರಿಂದ **30/10/2024** ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ : **05/11/2024** ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ಟೆಂಡರ್ ತೆರೆಯುವ ದಿನಾಂಕ ಹಾಗೂ ಸಮಯ : **06/11/2024** ರ ಮಧ್ಯಾಹ್ನ 3.00 ಗಂಟೆ.

**ನಿಬಂಧನೆಗಳು** : ಷರತ್ತು/ನಿಬಂಧನೆಗಳಿಗೆ, ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಗ್ರಾಮ ಪಂಚಾಯತ ಕದಾಂಪೂರದಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕದಾಂಪೂರ**

**ಸಹಿ/- ಅಧ್ಯಕ್ಷರು ಗ್ರಾಮ ಪಂಚಾಯತ ಕದಾಂಪೂರ**

ವಾಸಾಸಂಇ/ಗದಗ/ಕೆಎಸ್ಎಂಸಿಎ/315/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka